# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 180 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 05–02–2025 ಬುಧವಾರ | ಪುಟ: 4 | ಬೆಲೆ : ರೂ.2–00

Volume - 02 Issue - 180 | RNI No: KARKAN/2023/88462 | KA/SK/CTA-874/2024-2026 | Chitradurga | Date: 05-02-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಕರ್ನಾಟಕ ದರ್ಶನ ಕಾರ್ಯಕ್ರಮ ಸಹಕಾರಿ 2

ಸವಿತಾ ಸಮಾಜ ಬಾಂಧವರು ಶ್ರಮ ಹಾಗೂ ಕಾಯಕ ಜೀವಿಗಳು 3

ಇಂದು ರಥಸಪ್ತಮಿ; 108 ಸೂರ್ಯ ನಮಸ್ಕಾರ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಹಿರೇಹಳ್ಳಿ ಟೋಲ್ ಬಳಿ ಬೈಕ್ ಪಲ್ಟಿ: ಬೈಕ್‌ಸವಾರ ಕೆ.ವಿರುಪಣ್ಣ ಸಾವು

» **ಚಳ್ಳಕೆರೆ**

ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ಹಿರೇಹಳ್ಳಿಟೋಲ್ ಬಳಿ ಬೆಂಗಳೂರಿನಿಂದ ಸಿರಗುಪ್ಪ ತಾಲ್ಲೂಕು ಕೊಂಚಿಗೇರಿ ಗ್ರಾಮದ ಕೆ.ವಿರುಪಣ್ಣ(43) ತನ್ನ ಬೈಕ್‌ನಲ್ಲಿ ಸೋಮ್ಲಾಪುರ ಗ್ರಾಮಕ್ಕೆ ಊರಮಾರಮ್ಮನ ಹಬ್ಬಕ್ಕೆಂದು ತೆರಳುವ ಸಂದರ್ಭದಲ್ಲಿ ಮಂಗಳವಾರ ಮಧ್ಯಾಹ್ನ ಸುಮಾರು 11ರ ಸಮಯದಲ್ಲಿ ಚಾಲಕನ ನಿಯಂತ್ರಣ ತಪ್ಪಿ ಬೈಕ್ ಪಲ್ಟಿಯಾಗಿದ್ದು ಬೈಕ್ ಸವಾರ ಕೆ.ವಿರುಪಣ್ಣ ತೀರ್ವವಾಗಿ ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಗೆ ಸಾಗಿಸುವ ದಾರಿಮಧ್ಯ ಮೃತಪಟ್ಟಿರುತ್ತಾನೆ.

ಕೆ.ವಿರುಪಣ್ಣ ಬೆಂಗಳೂರಿನಲ್ಲಿ ವಾಸವಿದ್ದು, ಗ್ರಾಮಕ್ಕೆ ಹಬ್ಬಕ್ಕಾಗಿ ತೆರಳುವ ಸಂದರ್ಭದಲ್ಲಿ ಈ ಅವಘಡ ಸಂಭವಿಸಿದೆ. ಮೃತ ಸಂಬಂಧಿ ಹನುಮಂತಪ್ಪ ಎಂಬುವವರು ದೂರು ನೀಡಿದ್ದು, ಪಿಎಸ್‌ಐ ಲೋಕೇಶ್ ಪ್ರಕರಣ ದಾಖಲಿಸಿದ್ದಾರೆ.

### ಮಕ್ಕಳ ಆಸ್ಪತ್ರೆಯಲ್ಲಿ ಮೂಲಭೂತ ಸೌಲಭ್ಯ ಒದಗಿಸಿ



» **ಚಿತ್ರದುರ್ಗ**

ಜಿಲ್ಲಾಸ್ಪತ್ರೆ ಆವರಣದಲ್ಲಿ ಹೊಸದಾಗಿ ನಿರ್ಮಿಸಿರುವ ಮಕ್ಕಳ ಆಸ್ಪತ್ರೆಯಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ ಕೆಟ್ಟು ಹೋಗಿರುವ ಲಿಫ್ಟ್‌ನ್ನು ರಿಪೇರಿ ಮಾಡಿಸುವಂತೆ ಕರುನಾಡ ವಿಜಯಸೇನೆಯಿಂದ ಜಿಲ್ಲಾ ಶಸ್ತ್ರ ಚಿಕಿತ್ಸಕರಿಗೆ ಸೋಮವಾರ ಮನವಿ ಸಲ್ಲಿಸಲಾಯಿತು.

ನಾಲ್ಕು ಮಹಡಿಯ ಮಕ್ಕಳ ಆಸ್ಪತ್ರೆಯನ್ನು ಕಟ್ಟಿಸಲಾಗಿದೆಯಾದರೂ ಅಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿದೆ. ಲಿಫ್ಟ್ ಕೆಟ್ಟು ಹೋಗಿರುವುದರಿಂದ ವಯಸ್ಸಾದವರು ಮೆಟ್ಟಿಲು ಹತ್ತಿ ಇಳಿಯಲು ಕಷ್ಟವಾಗುತ್ತದೆ. ಕಳೆದ ವಾರ ಆಸ್ಪತ್ರೆಯ ಮೇಲ್ಚಾವಣಿ ಕುಸಿದಿರುವುದಕ್ಕೆ ಕಳಪೆ ಕಾಮಗಾರಿಯೇ ಕಾರಣವಾಗಿದೆ. ಕಟ್ಟಡಕ್ಕೆ ಚುರುಕಿ ಹಾಕಿ ಭದ್ರಪಡಿಸಬೇಕು. ಮಕ್ಕಳ ಮಂಚಗಳಿಗೆ ಅಳವಡಿಸಿರುವ ಪಟ್ಟಿಗಳು ಹಳೆಯದಾಗಿರುವುದರಿಂದ ಬದಲಾವಣೆ ಮಾಡುವಂತೆ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಜಿಲ್ಲಾ ಶಸ್ತ್ರ ಚಿಕಿತ್ಸಕರಲ್ಲಿ ಒತ್ತಾಯಿಸಿದರು. ಶಶಿ, ಗೋಪಿನಾಥ್ ಎಸ್. ಈ ಸಂದರ್ಭದಲ್ಲಿದ್ದರು.

### ಅನಾಮಧೇಯ ಶವದ ವಾರಸುದಾರ ಪತ್ತೆಗೆ ಮನವಿ

» **ದಾವಣಗೆರೆ**

ವಿದ್ಯಾನಗರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಸುಮಾರು 50 ವರ್ಷದ ವ್ಯಕ್ತಿಯ ಮೃತ ದೇಹ ಕಂಡು ಬಂದಿದ್ದು, ಎತ್ತರ 160, ಕಂದು ಮೈಬಣ್ಣ, ತೆಳ್ಳನೆಯ ಮೈಕಟ್ಟು ಹೊಂದಿರುವ ಅನಾಮಧೇಯ ಶವದ ವಾರಸುದಾರರ ಮಾಹಿತಿ ಕಂಡು ಬಂದಲ್ಲಿ ವಿದ್ಯಾನಗರ ಪೊಲೀಸ್ ಠಾಣೆಯ 08192–262688 ನಂಬರ್‌ಗೆ ತಿಳಿಸಲು ಠಾಣಾಧಿಕಾರಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಕಾರ್ಯಪಡೆ ಪರಿಸರ ಆರೋಗ್ಯ ಸಮಿತಿ ಸಭೆ

» **ದಾವಣಗೆರೆ**

ಜಿಲ್ಲಾ ಮಟ್ಟದ ಪರಿಸರ ಆರೋಗ್ಯ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಫೆಬ್ರವರಿ 5 ರಂದು ಮಧ್ಯಾಹ್ನ 4 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆಯಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ.

**ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ 1ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶೆ**

# ಜಿಲ್ಲೆಯಲ್ಲಿ ಬಾಲ್ಯವಿವಾಹಕ್ಕೆ ಕಡಿವಾಣ ಹಾಕಲು ಹೆಚ್ಚಿನ ಜಾಗೃತಿ ಅಗತ್ಯ: ಚೈತ್ರ

» **ಚಿತ್ರದುರ್ಗ**

ರಾಜ್ಯದಲ್ಲಿಯೇ ಚಿತ್ರದುರ್ಗ ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚಿದ್ದು, ಬಾಲ್ಯವಿವಾಹಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಹೆಚ್ಚಿನ ಜಾಗೃತಿ ಅಗತ್ಯ ಎಂದು 1ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶೆ ಎ.ಎಂ.ಚೈತ್ರ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಯ 10 ವರ್ಷ ಪೂರ್ಣಗೊಳಿಸಿದ ಪ್ರಯುಕ್ತ "ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ತಂದೆ–ತಾಯಿಗಳು ತಮ್ಮ ಜವಾಬ್ದಾರಿಯನ್ನು ಕಳೆದುಕೊಳ್ಳಬೇಕು ಎಂಬ ಉದ್ದೇಶದಿಂದ ನಿಗದಿತ ವಿವಾಹ ವಯಸ್ಸು ಉಲ್ಲಂಘಿಸಿ ಅಪ್ರಾಪ್ತರನ್ನು ವಿವಾಹ ಮಾಡುವ ಪದ್ಧತಿ ಕಾನೂನಿನ ಪ್ರಕಾರ ಅಪರಾಧ. ಹಾಗಾಗಿ ಬಾಲ್ಯವಿವಾಹಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಪೋಷಕರು ಹೆಚ್ಚು ನಿಗಾ ವಹಿಸಿ ಬಾಲ್ಯವಿವಾಹ ತಡೆಯಲು ಪ್ರಯತ್ನ ಮಾಡಬೇಕು ಎಂದು ಹೇಳಿದರು. ಹೆಣ್ಣು ಮಕ್ಕಳ ಮುಂದಿನ ಉತ್ತಮ ಭವಿಷ್ಯಕ್ಕಾಗಿ ಹೆಣ್ಣು ಮಕ್ಕಳಿಗಿರುವ ಹಕ್ಕು ಮತ್ತು ಕರ್ತವ್ಯಗಳನ್ನು ತಿಳಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನ ಆಚರಿಸಲಾಗುತ್ತಿದೆ. ಆಸ್ತಿ ಹಕ್ಕು ಸೇರಿದಂತೆ ಹೆಣ್ಣು ಮಕ್ಕಳಿಗೆ ವಿವಿಧ ಹಕ್ಕುಗಳು ಕಾನೂನಿನ ಅಡಿಯಲ್ಲಿ ಇವೆ. ಅವುಗಳನ್ನು ತಿಳಿದುಕೊಳ್ಳಬೇಕು. ಮಗು ತಾಯಿ ಗರ್ಭದಲ್ಲಿ ಇರುವಾಗಲೇ ಹೆಣ್ಣು ಮಕ್ಕಳಿಗೆ ಹಕ್ಕುಗಳು ಪ್ರಾರಂಭವಾಗುತ್ತವೆ ಎಂದು ಹೇಳಿದರು.

ಪ್ರಸ್ತುತ ದಿನಮಾನಗಳಲ್ಲಿ ಮಹಿಳೆಯರಿಗೆ ಸಾಕಷ್ಟು ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಇದರ ಜೊತೆಗೆ ಕಾನೂನಿನ ಅಡಿಯಲ್ಲಿ ಹೆಣ್ಣು ಮಕ್ಕಳಿಗಾಗಿ ಬಹಳಷ್ಟು ಕಾನೂನುಗಳನ್ನು ರೂಪಿಸಲಾಗಿದ್ದು, ಪ್ರತಿಯೊಂದು ಹಂತದಲ್ಲಿಯೂ ಸಹ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.


ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಮಾತನಾಡಿ, ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯನ್ನು 2008ರಿಂದಲೂ ಪ್ರತಿ ವರ್ಷವೂ ಆಚರಣೆ ಮಾಡಲಾಗುತ್ತಿದೆ. ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದಿಂದ ಈ ದಿನಾಚರಣೆ ಅನುಷ್ಠಾನಗೊಳಿಸಲಾಗುತ್ತಿದೆ. ಸಮಾಜದಲ್ಲಿ ಹೆಣ್ಣು ಮಕ್ಕಳು ಎದುರಿಸುತ್ತಿರುವ ಅಸಮಾನತೆಗಳ ಬಗ್ಗೆ ಸಾರ್ವಜನಿಕ ಜಾಗೃತಿ ಮೂಡಿಸಲು ಪ್ರಾರಂಭಿಸಲಾಯಿತು. ಹಾಗೆಯೇ ಹೆಣ್ಣು ಮಕ್ಕಳ ಹಕ್ಕುಗಳು, ಶಿಕ್ಷಣ ಹಾಗೂ ಕಲ್ಯಾಣವನ್ನು ಎತ್ತಿಹಿಡಿಯಲು ಮೀಸಲಾಗಿರುವ ಮಹತ್ವದ ಸಂದರ್ಭವೂ ಹೌದು ಎಂದು ತಿಳಿಸಿದ ಅವರು, ಲಿಂಗ ತಾರತಮ್ಯ ಬಗ್ಗೆ ಅಡೆತಡೆ ಇಲ್ಲದೆ ಅಭಿವೃದ್ಧಿ ಹೊಂದುವ ವಾತಾವರಣ ಸೃಷ್ಠಿಸುವ ಗುರಿ ಹೊಂದಿದೆ ಎಂದರು.

ಹೆಣ್ಣು ಮಕ್ಕಳ ಬಗೆಗಿನ ಸಾಮಾಜಿಕ ವರ್ತನೆ ಬದಲಾಯಿಸುವುದು, ಹೆಣ್ಣು ಭ್ರೂಣ ಹತ್ಯೆಯಂತಹ ಸಮಸ್ಯೆಗಳನ್ನು ಪರಿಹರಿಸುವುದು ಸೇರಿದಂತೆ ಹೆಣ್ಣು ಮಕ್ಕಳ ಸಮಗ್ರಬೆಳವಣಿಗೆ ಖಚಿತಪಡಿಸುವುದಲ್ಲದೇ ಹೆಣ್ಣು ಮಕ್ಕಳ ರಕ್ಷಣೆಗಾಗಿ ಬಾಲ್ಯ ವಿವಾಹ ನಿಷೇಧ ಕಾಯ್ದೆ, ಲೈಂಗಿಕ ದೌರ್ಜನ್ಯದಿಂದ ಮಕ್ಕಳ ರಕ್ಷಣೆ ಕಾಯ್ದೆ, ಬಾಲನ್ಯಾಯ ಕಾಯ್ದೆ, ಮಕ್ಕಳ ಸಹಾಯವಾಣಿ ಸೇರಿದಂತೆ ಹೆಣ್ಣು ಮಕ್ಕಳನ್ನು ಸಬಲೀಕರಣಗೊಳಿಸಲು, ಸಮಾನತೆ ಮತ್ತು ಅವಕಾಶದ ವಾತಾವರಣ ಬೆಳೆಸುವ ನಿಟ್ಟಿನಲ್ಲಿ ಅನೇಕ ಕಾನೂನುಗಳ ಜಾರಿಯಲ್ಲಿವೆ ಎಂದರು. ಇದೇ ಸಂದರ್ಭದಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಪ್ರಶಸ್ತಿ ಪ್ರಧಾನ, ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಯಲ್ಲಿ ಹೆಚ್ಚು ಅಂಕಗಳನ್ನ ಪಡೆದ ವಿದ್ಯಾರ್ಥಿನಿಯರಿಗೆ ಸನ್ಮಾನ ಮಾಡಲಾಯಿತು. ನಂತರ ವಿದ್ಯಾರ್ಥಿನಿಯರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಗಾಯತ್ರಿ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಜೆ.ವೈಶಾಲಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ, ಜಿಲ್ಲಾ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತಾ ನೆಲವತಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಸುಧಾ, ವೀಣಾ ಇದ್ದರು.

## ಆಪೆಆಟೋಕ್ಕೆ ಲಾರಿ ಡಿಕ್ಕಿ: 10ಕ್ಕೂ ಹೆಚ್ಚು ಜನರಿಗೆ ಗಾಯ

**ಚಳ್ಳಕೆರೆ:** ತಾಲ್ಲೂಕಿನ ಬಾಲೇನಹಳ್ಳಿ ಗೇಟ್ ಬಳಿ ನನ್ನಿವಾಳದಿಂದ ಕೂಲಿಕೆಲಸಕ್ಕಾಗಿ ಆಪೆ ಆಟೋದಲ್ಲಿ ಬರುವ ಸಂದರ್ಭದಲ್ಲಿ ಚಿತ್ರದುರ್ಗ ಕಡೆಯಿಂದ ಬಂದ ಲಾರಿ ಆಟೋ ಹಿಂಭಾಗಕ್ಕೆ ಡಿಕ್ಕಿ ಹೊಡೆದ ಪರಿಣಾಮ ಆಟೋದಲ್ಲಿದ್ದ 14 ಜನ ಮಹಿಳಾ ಕೂಲಿಕಾರ್ಮಿಕರು ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ. ನನ್ನಿವಾಳ ಗ್ರಾಮದ ಟಿ.ರೇಖಾ(30),ಶಿವಮ್ಮ(52),ಅಶ್ವಿನಿ(34),ಮಲ್ಲಮ್ಮ(45),ಭಾಗ್ಯಮ್ಮ(32) ಮುಂತಾದವರು ಆಪೆಆಟೋದಲ್ಲಿ ಕೂಲಿಕೆಲಸಕ್ಕಾಗಿ ತೆರಳುತ್ತಿದ್ದು, ಚಿತ್ರದುರ್ಗದಿಂದ ಪಾವಗಡಕ್ಕೆ ಸರ್ಕಾರದ ಪಡಿತರವನ್ನು ರವಾನಿಸುತ್ತಿದ್ದ ಲಾರಿ ಹಿಂಭಾಗಕ್ಕೆ ಡಿಕ್ಕಿ ಪಡಿಸಿದೆ. ಡಿಕ್ಕಿರಭಸಕ್ಕೆ ಆಟೋ ರಸ್ತೆಪಕ್ಕಕ್ಕೆ ಪಲ್ಟಿಯಾಗಿ ಆಟೋದಲ್ಲಿದ್ದವರಿಗೆ ಲಘುಪ್ರಮಾಣದ ಗಾಯಗಳಾಗಿವೆ. ಆಟೋಚಾಲಕ ಕುಮಾರನ ತಲೆಗೆ ಪೆಟ್ಟುಬಿದ್ದಿರುತ್ತದೆ. ಲಾರಿಚಾಲಕ ಲಕ್ಷ್ಮಿನಾರಾಯಣವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.



## ಪ್ರಮುಖ ಸುದ್ದಿ

**ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ**

# ಆರ್.ಬಿ.ಐ ಮಾರ್ಗಸೂಚಿ ಪಾಲನೆ ಕಡ್ಡಾಯ; ಸಾಲ ಮಂಜೂರಾತಿ, ವಸೂಲಾತಿ ನಿಯಮ ಬದ್ಧವಾಗಿರಲಿ

» **ಚಿತ್ರದುರ್ಗ**

ಮೈಕ್ರೋ ಫೈನಾನ್ಸ್, ಲೇವಾದೇವಿ, ಗಿರಿವಿ ಹಣಕಾಸು ಸಂಸ್ಥೆಗಳು ಕಡ್ಡಾಯವಾಗಿ ಆರ್.ಬಿ.ಐ(ಭಾರತೀಯರಿಸರ್ವ್‌ಬ್ಯಾಂಕ್) ಮಾರ್ಗಸೂಚಿ ಪಾಲನೆ ಮಾಡಬೇಕು. ಸಾಲ ಮಂಜೂರಾತಿ ಹಾಗೂ ವಸೂಲಾತಿ ನಿಯಮ ಬದ್ಧವಾಗಿರಬೇಕು. ಯಾವುದೇ ಕಾರಣಕ್ಕೂ ನಿಯಮಬಾಹಿರ ಮಾರ್ಗ ಅನುಸರಿಸಬಾರದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

ಸಾಲ ವಸೂಲಾತಿ ಸಮಯದಲ್ಲಿ ಸಾರ್ವಜನಿಕರಿಗೆ ನೀಡುತ್ತಿರುವ ಕಿರುಕುಳ ಹಾಗೂ ಅತಿಯಾದ ಬಡ್ಡಿ ವಿಧಿಸುತ್ತಿರುವ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಮೈಕ್ರೋ ಫೈನಾನ್ಸ್, ಲೇವಾದೇವಿ, ಗಿರಿವಿ ಹಣಕಾಸು ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಒಬ್ಬರ ಹೆಸರಿನಲ್ಲಿ ಮೊತ್ತೊಬ್ಬರಿಗೆ ಸಾಲ ನೀಡುವುದಾಗಲಿ, ವಸೂಲಿ ಮಾಡುವುದಾಗಲಿ ಮಾಡಬಾರದು. ಸಾಲ ಮಂಜೂರಾತಿ ಸಂದರ್ಭದಲ್ಲಿ ನೇರವಾಗಿ ಸಾಲ ಪಡೆಯುವವರೊಂದಿಗೆ ವ್ಯವಹರಿಸಬೇಕು. ಮಧ್ಯವರ್ತಿಗಳಿಗೆ ಅವಕಾಶ ನೀಡಬಾರದು. ಸಾಲ ಮಂಜೂರಾತಿ ನಿಯಮಗಳು, ಸಾಲದ ಮೊತ್ತ, ಅವಧಿ, ಬಡ್ಡಿ ದರ, ಹಿಂಪಾವತಿ ಅವಧಿ ಸೇರಿದಂತೆ ಅಗತ್ಯ ಮಾಹಿತಿಗಳನ್ನೊಳಗೊಂಡ ಸತ್ಯಾಂಶ ಮಾಹಿತಿಯನ್ನು (ಫ್ಯಾಕ್ಟ್ ಶೀಟ್) ಸಾಲ ಪಡೆಯುವವರಿಗೆ ಕಡ್ಡಾಯವಾಗಿ ನೀಡಬೇಕು ಎಂದು ಸೂಚಿಸಿದರು.

ಸಾಲ ಮಂಜೂರಾತಿ ಸಂದರ್ಭದಲ್ಲಿಯೇ ಸಂಸ್ಥೆಯ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ಸಾಲ ಪಡೆಯುವವರಿಗೆ ಮನವರಿಕೆ ಮಾಡಿಕೊಡಬೇಕು. ಯಾವುದೇ ಕಾರಣಕ್ಕೂ ಮಾನವೀಯತೆ ಹಾಗೂ ಮಾನವೀಯ ಮೌಲ್ಯಗಳನ್ನು ಮೀರಿ ಸಾಲ ವಸೂಲಾತಿ ಮಾಡಬಾರದು. ನಿಯಮಬದ್ಧವಾಗಿಯೇ ಸಾಲ ವಸೂಲಾತಿ ಮಾಡಬೇಕು. ಯಾವುದೇ ತರಹದ ಒತ್ತಡವನ್ನು ಸಾಲಗಾರರ ಮೇಲೆ ಹೇರಬಾರದು. ಅಪರಾಧ ಹಿನ್ನಲೆ ಹೊಂದಿರುವರನ್ನು ಸಾಲ ವಸೂಲಾತಿಗೆ ನೇಮಿಸಿಕೊಳ್ಳಬಾರದು ಎಂದು ಹೇಳಿದರು.

ಮೈಕ್ರೋ ಫೈನಾನ್ಸ್ ಸಾಲ ವಸೂಲಾತಿ ಕಿರುಕುಳ ತಡೆಯುವ ನಿಟ್ಟಿನಲ್ಲಿ ಮಾರ್ಗಸೂಚಿಗಳ ರೂಪಿಸಿ ರಾಜ್ಯ ಸರ್ಕಾರ ಸುಗ್ರೀವಾಜ್ಞೆ ಮೂಲಕ ಹೊಸ ಕಾಯ್ದೆ ಜಾರಿ ಮಾಡಲಿದೆ. ಇದರ ಅನುಸಾರ ಉಪವಿಭಾಗಾಧಿಕಾರಿಗಳು ಅಧ್ಯಕ್ಷತೆಯಲ್ಲಿ ಪ್ರಾಧಿಕಾರ ರಚಿಸಲಾಗುವುದು. ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಹಾಯವಾಣಿ ಘಟಕ ತೆರೆಯಲಾಗುವುದು. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ತಮ್ಮ ಮಾಹಿತಿಯನ್ನು ಜಿಲ್ಲಾಧಿಕಾರಿ ಕಚೇರಿಗೆ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಮಾತನಾಡಿ, ಹಣಕಾಸು ಸಂಸ್ಥೆಗಳು ಸಾಲ ನೀಡುವಾಗ ಪಾರದರ್ಶಕತೆಯನ್ನು ಕಾಯ್ದುಕೊಳ್ಳಬೇಕು. ಸಾಲ ನೀಡುವಾಗ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಮನಿ ಲೆಂಡರ್ ಆಕ್ಟ್, ಪಾನ್ ಬ್ರೋಕರ್ ಆಕ್ಟ್ ಹಾಗೂ ಆರ್.ಬಿ.ಐ. ಮಾರ್ಗಸೂಚಿಗಳನ್ನು ಸರಿಯಾಗಿ ತಿಳಿದುಕೊಳ್ಳಬೇಕು. ಯಾವುದೇ ಕಾರಣಕ್ಕೂ ಸಾಲ ವಸೂಲಾತಿಗೆ ಕಾನೂನುಬಾಹಿರ ಕ್ರಮಗಳನ್ನು ಕೈಗೊಳ್ಳಬಾರದು. ಮನೆಗೆ ತೆರಳಿ ಗಲಾಟೆ, ಸಂಬಂಧಿಕರಿಗೆ ಕಿರುಕುಳ, ರಾತ್ರಿ ಸಮಯದಲ್ಲಿ ಸಾಲ ವಸೂಲಾತಿಯಂತಹ ಮಾರ್ಗಗಳನ್ನು ಅನುಸರಿಸಬಾರದು. ರಾಜ್ಯ ಸರ್ಕಾರ ಇಂತಹ ಕ್ರಮಗಳನ್ನು ಗಂಭೀರವಾಗಿ ಪರಿಗಣಿಸಿದೆ. ಕಾಯ್ದೆಗಳನ್ನು ಮೀರಿ ಸಾಲ ವಸೂಲಾತಿ ಮಾಡುತ್ತಿರುವ ಬಗ್ಗೆ ದೂರು ಕೇಳಿಬಂದರೆ, ತಕ್ಷಣವೇ ಸಾಲ ವಸೂಲಿಗೆ ಬಂದವರ ಮೇಲೆ ಅಪರಾಧಿಕ ಅತಿಕ್ರಮಣ, ದೌರ್ಜನ್ಯ ಹಾಗೂ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಅಪರಾಧಗಳ ಅಡಿ ಬಂಧಿಸಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕ ಕುಮಾರ್ ಬಾಬು, ಡಿವೈಎಸ್‌ಪಿಗಳಾದ ದಿನಕರ್, ರಾಜಣ್ಣ, ಶಿವಕುಮಾರ್ ಹಾಗೂ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು ಇದ್ದರು.

## ಫಾಸ್ಟ್ ನ್ಯೂಸ್

### ತೇರಾಪಂಥ್‌ನ 161 ನೇ ಮರ್ಯಾದಾ ಮಹೋತ್ಸವ



» ಚಿತ್ರದುರ್ಗ

ಮಾನವನಿಗೆ ಸಂಸ್ಕಾರ ಕಲಿಸಿ ಮೌಲ್ಯ ಹೆಚ್ಚಿಸಬೇಕಾದರೆ ಗುರುಗಳಿಂದ ಮಾತ್ರ ಸಾಧ್ಯ ಎಂದು ಕಬೀರಾನಂದಾಶ್ರಮದ ಶಿವಲಿಂಗಾನಂದ ಮಹಾಸ್ವಾಮಿಗಳು ಹೇಳಿದರು. ದಾವಣಗೆರೆ ರಸ್ತೆಯಲ್ಲಿರುವ ಜೈನ್ ಶ್ವೇತಾಂಬರ್ ತೇರಾಪಂಥ್ ಸಭಾ ಭವನದಲ್ಲಿ ಮಂಗಳವಾರ ನಡೆದ ತೇರಾಪಂಥ್‌ನ 161 ನೇ ಮರ್ಯಾದಾ ಮಹೋತ್ಸವದಲ್ಲಿ ಆಶೀರ್ವಚನ ನೀಡಿದರು. ಮನುಷ್ಯನ ಮನಸ್ಸು ಚಂಚಲವಾದುದು, ಒಂದು ಕಡೆ ನಿಲ್ಲುವುದಿಲ್ಲ. ಇಂತಹ ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಧ್ಯಾನದಿಂದ ಮಾತ್ರ ಮನಸ್ಸನ್ನು ಹತೋಟಿಯಲ್ಲಿಟ್ಟುಕೊಳ್ಳಬಹುದು. ಜೈನ ಸಮುದಾಯವೆಂದರೆ ಅಹಿಂಸಾವಾದಿಗಳು, ಯಾರಿಗೂ ಹಿಂಸೆ ಕೊಟ್ಟವರಲ್ಲ. ಕಾತ್ರಾಳು ಸಮೀಪವಿರುವ ನಮ್ಮ ಗೋಶಾಲೆಗೆ ಜೈನ ಸಮುದಾಯದವರ ಕೊಡುಗೆಯಿದೆ ಎನ್ನುವುದನ್ನು ನೆನಪಿಸಿಕೊಂಡರು.ತೇರಾಪಂಥ್ ಸಂಘದ ಯುಗ ಪ್ರಧಾನ ಆಚಾರ್ಯ ಮಹಾ ಪ್ರಜ್ಞಾಜೀಯವರ ಶಿಷ್ಯೆ ಸಾಧ್ವಿ ಸೌಮ್ಯಸಾಜಿ ಆದಿರಾಣ ಮರ್ಯಾದಾ ಮಹೋತ್ಸವ ಸಾನಿಧ್ಯ ವಹಿಸಿದ್ದರು.ತೇರಾಪಂಥ್ ಸಂಘದ ಅಧ್ಯಕ್ಷ ನೇಮಿಚಂದ್ ಬಾಫ್ನಾ, ಕಾರ್ಯದರ್ಶಿ ಭರತ್ ಕೊಠಾರಿ, ಹಿರಿಯ ಪತ್ರಕರ್ತ ಟಿ.ಕೆ.ಬಸವರಾಜ್, ಜವೇರಿಲಾಲ್‌ಜಿ ತಲೇಸರಾ, ಸಂಘದ ಸದಸ್ಯರುಗಳಾದ ಶಾಂತಿಲಾಲ್ ಕೊಠಾರಿ, ಬಾಬುಲಾಲ್ ಜಿ.ಬಾಪ್ನಾ, ಗೀಸುಲಾಲ್‌ಜಿ ಭಂಡಾರಿ, ಸುರೇಶ್‌ಕುಮಾರ್ ಸಿಸೋಡಿಯ, ಅರವಿಂದ್ ಬಾಫ್ನಾ, ತೇರಾಪಂಥ್ ಸಭಾದ ಸದಸ್ಯರುಗಳು, ತೇರಾಪಂಥ್ ಮಹಿಳಾ ಮಂಡಲ್, ಯುವ ಪರಿಷತ್‌ನವರು ಮರ್ಯಾದಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದರು.

### ಪಿಂಟು ಜೈನ್‌ಗೆ ಜಯ ಕರ್ನಾಟಕ ಸಂಘಟನೆಯಿಂದ ಸನ್ಮಾನ



» ಚಿತ್ರದುರ್ಗ

ಐತಿಹಾಸಿಕ ಚಿತ್ರದುರ್ಗದಲ್ಲಿ ರಸ್ತೆ ಅಗಲೀಕರಣದ ಮಾತುಕೇಳಿಬಂದಾಗಲೆಲ್ಲಾವಿರೋಧಿಸುತ್ತಿರುವವರ ನಡುವೆ ಗಾಂಧಿ ವೃತ್ತದ ಸಮೀಪ ಅಂದಾಜು ಮೂರು ಕೋಟಿ ರೂ.ಬೆಲೆ ಬಾಳುವ ಕಟ್ಟಡವನ್ನು ರಸ್ತೆ ಅಗಲೀಕರಣಕ್ಕೆ ಬಿಟ್ಟುಕೊಡಲು ಪಿಂಟು ಜೈನ್ ಮುಂದೆ ಬಂದಿರುವುದು ನಿಜಕ್ಕೂ ಸೋಜಿಗದ ಸಂಗತಿ. ನಗರದ ಅಲ್ಲಲ್ಲಿ ಅವೈಜ್ಞಾನಿಕ ಡಿವೈಡರ್‌ಗಳನ್ನು ತೆರವುಗೊಳಿಸುತ್ತಿರುವ ಶಾಸಕ ಕೆ.ಸಿ.ವೀರೇಂದ್ರಪಪ್ಪಿರವರ ಅಧಿಕಾರವಧಿಯಲ್ಲಿ ಪ್ರವಾಸಿ ಮಂದಿರದಿಂದ ಗಾಂಧಿವೃತ್ತ ಹೊಳಲ್ಕೆರೆ ರಸ್ತೆ, ದಾವಣಗೆರೆ ಹಾಗೂ ಮೆದೇಹಳ್ಳಿ ರಸ್ತೆಯೂ ಅಗಲೀಕರಣವಾದರೆ ವಾಹನ ಹಾಗೂ ಪಾದಚಾರಿಗಳ ಸಂಚಾರಕ್ಕೆ ಅನುಕೂಲವಾಗಲಿದೆ ಎನ್ನುವ ಮಹದಾಸೆ ಹೊತ್ತು ವಿ.ಪಿ.ಟೆಕ್ಸ್‌ಟೈಲ್ ಮತ್ತು ಗಾರ್ಮೆಂಟ್ಸ್ ಮಳಿಗೆಯನ್ನು ರಸ್ತೆ ಅಗಲೀಕರಣಕ್ಕೆ ಬಿಟ್ಟುಕೊಡಲು ಮುಂದೆ ಬಂದಿರುವ ಕಟ್ಟಡದ ಮಾಲೀಕ ಪಿಂಟು ಜೈನ್‌ಗೆ ಜಯ ಕರ್ನಾಟಕ ಸಂಘಟನೆಯಿಂದ ಸನ್ಮಾನಿಸಲಾಯಿತು. ಜಯ ಕರ್ನಾಟಕ ಸಂಘಟನೆ ಜಿಲ್ಲಾಧ್ಯಕ್ಷ ರಮೇಶ್ ಮಧುರಿ, ಕಾರ್ಯಾಧ್ಯಕ್ಷ ಅರುಣ್‌ಕುಮಾರ್, ಉಪಾಧ್ಯಕ್ಷ ಪ್ರಕಾಶ್, ಸುರೇಶ್, ಪ್ರವೀಣ್, ಸುನೀಲ್, ರಘು, ಅನಿಲ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಕಾಸವರಹಟ್ಟಿ ಸಹಕಾರ ಸಂಘಕ್ಕೆ ಅಧ್ಯಕ್ಷೆ-ಉಪಾಧ್ಯಕ್ಷೆ ಆಯ್ಕೆ



» ಚಿತ್ರದುರ್ಗ

ಕಾಸವರಹಟ್ಟಿ ವಿವಿದ್ದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಅಶ್ವಿನಿ ಶ್ರೀಧರರೆಡ್ಡಿ, ಉಪಾಧ್ಯಕ್ಷೆಯಾಗಿ ರೇಣುಕ ಪುಟ್ಟಮ್ಮ ಇವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ನೂತನವಾಗಿ ಆಯ್ಕೆಯಾಗಿರುವ ಅಧ್ಯಕ್ಷೆ-ಉಪಾಧ್ಯಕ್ಷೆ ಇವರುಗಳನ್ನು ಸಂಘದಲ್ಲಿ ಅಭಿನಂದಿಸಲಾಯಿತು.

---

### ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಅಂಗನವಾಡಿಗಳಿಗೆ ಸೌಕರ್ಯ ಕಲ್ಪಿಸಲು ಗಡುವು

» ಚಿತ್ರದುರ್ಗ

ಅಂಗವಾಡಿ ಕೇಂದ್ರಗಳಲ್ಲಿ ತಿಂಗಳ ಒಳಗಾಗಿ ಶೌಚಾಲಯ, ಕುಡಿಯುವ ನೀರು ಹಾಗೂ ವಿದ್ಯುತ್ ಸಂಪರ್ಕ ಸೇರಿದಂತೆ ಇತರ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ ಸಿಡಿಪಿಓಗಳು ವರದಿ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರಗತಿ ಕುರಿತು ಜರುಗಿದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಲಜೀವನ್ ಮಿಷನ್ ಅಡಿಯಲ್ಲಿ ಗ್ರಾಮೀಣ ಭಾಗದ ಎಲ್ಲ ಅಂಗನವಾಡಿಗಳಿಗೆ ಕುಡಿಯುವ ನೀರಿನ ಸಂಕರ್ಪವನ್ನು ಕಲ್ಪಿಸಲಾಗುತ್ತಿದೆ. ಆದರೂ ಜಿಲ್ಲೆಯಲ್ಲಿ ಗ್ರಾಮೀಣ ಭಾಗದ 38 ಅಂಗನವಾಡಿ ಕೇಂದ್ರಗಳಲ್ಲಿ ನೀರಿನ ಸಂಪರ್ಕ ಇಲ್ಲ ಎಂದರೆ ಹೇಗೆ? ಕುಡಿಯುವ ನೀರಿನ ಸಂಪರ್ಕ ಇಲ್ಲದ ಅಂಗನವಾಡಿಗಳ ವಿವರವನ್ನು ಜಿಲ್ಲಾ ಪಂಚಾಯಿತಿ ಸಿಇಓ, ತಾಪಂ ಇಓ ಹಾಗೂ ಪಿಡಿಓಗಳ ಗಮನಕ್ಕೆ ತಂದು ಕೂಡಲೇ ನೀರಿನ ಸಂಪರ್ಕ ಕಲ್ಪಿಸಬೇಕು. ಶೌಚಾಲಯಗಳು ಇಲ್ಲದ ಅಂಗನವಾಡಿ ಕೇಂದ್ರಗಳಲ್ಲಿ ಕೂಡಲೇ ಶೌಚಾಲಯಗಳನ್ನು ನಿರ್ಮಿಸಬೇಕು. ವಿದ್ಯುತ್ ಸಂಪರ್ಕ ಇಲ್ಲದ 124 ಅಂಗನವಾಡಿ ಕೇಂದ್ರಗಳಿಗೆ ಬೆಸ್ಕಾಂ ಅಧಿಕಾರಿಗಳೊಂದಿಗೆ ಮಾತನಾಡಿ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್‌ಗೆ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಕೆ.ಎಂ.ಇ.ಆರ್.ಸಿ ಅಡಿ ನಿವೇಶನ ಲಭ್ಯ ಇರುವ 147 ಸ್ಥಳಗಳಲ್ಲಿ ನೂತನ ಅಂಗನವಾಡಿ ಕೇಂದ್ರಗಳ ನಿರ್ಮಾಣಕ್ಕೆ ಈಗಾಗಲೇ ಮಂಜೂರಾತಿ ನೀಡಲಾಗಿದೆ.

ಇದರ ಹೊರತು ವಿವಿಧ ಯೋಜನೆಗಳಡಿ ನಿರ್ಮಿತಿ, ಪಿ.ಆರ್.ಇ.ಡಿ. ಹಾಗೂ ಕೆ.ಆರ್.ಐ.ಡಿ.ಎಲ್ ವತಿಯಿಂದ ನಿರ್ಮಿಸುತ್ತಿರುವ ಅಂಗನವಾಡಿ ಕಟ್ಟಡಗಳ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು. ಕಾಮಗಾರಿ ಪ್ರಾರಂಭಿಸದ 59 ಕಡೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದವರು ಕೂಡಲೇ ಟೆಂಡರ್ ಕರೆದು ಕಾಮಗಾರಿಗೆ ಚಾಲನೆ ನೀಡಬೇಕು. ಒಂದು ವೇಳೆ ಕಾಮಗಾರಿ ಆರಂಭಿಸದಿದ್ದರೆ ನಿರ್ಮಾಣ ಏಜೆನ್ಸಿ ಬದಲಾವಣೆಗೆ ಕ್ರಮ ಕೈಗೊಳ್ಳಲಾಗುವುದು. ಈಗಾಗಲೇ ಪ್ರಗತಿಯಲ್ಲಿರುವ 35 ಕಾಮಗಾರಿಗಳನ್ನು ಪೂರ್ಣಗೊಳಿಸದೆ ಇರುವ ಗುತ್ತಿಗೆದಾರರ ಇತರೆ ಕಾಮಗಾರಿಗಳ ಬಿಲ್ ಪಾವತಿಸಬಾರದು. ಬಹಳಷ್ಟು ವರ್ಷಗಳಿಂದ ವಿವಿಧ ಯೋಜನೆಯಡಿ ಅಂಗನವಾಡಿ ಕಟ್ಟಡಗಳ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸದೆ ಬಾಕಿ ಉಳಿಸಿಕೊಂಡಿರುವ ನಿರ್ಮಿತಿ ಕೇಂದ್ರದ ಅಧಿಕಾರಿಗಳಿಗೆ ನೋಟಿಸ್ ನೀಡಿ ಶಿಸ್ತು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.

ವಿವಿಧ ಯೋಜನೆಗಳ ಅಡಿ ನಿರ್ಮಿತಿ ಕೇಂದ್ರಕ್ಕೆ 144, ಪಿ.ಆರ್.ಇ.ಡಿ 200 ಹಾಗೂ ಕೆ.ಆರ್.ಐ.ಡಿ.ಎಲ್ 20 ಅಂಗನವಾಡಿ ಕಟ್ಟಡ ನಿರ್ಮಿಸಲು ಗುರಿ ನಿಗದಿಪಡಿಸಲಾಗಿತ್ತು. ನಿರ್ಮಿತಿ ಕೇಂದ್ರ ವತಿಯಿಂದ 93 ಕಟ್ಟಡ ಪೂರ್ಣಗೊಳಿಸಲಾಗಿದೆ, 33 ಪ್ರಗತಿಯಲ್ಲಿವೆ, 18 ಕಾಮಗಾರಿಗಳು ಪ್ರಾರಂಭವಾಗಿಲ್ಲ. ಪಿ.ಆರ್.ಇ.ಡಿ ವತಿಯಿಂದ 106 ಕಟ್ಟಡಗಳನ್ನು ಪೂರ್ಣಗೊಳಿಸಲಾಗಿದೆ. 35 ಪ್ರಗತಿಯಲ್ಲಿದ್ದು, 59 ಕಾಮಗಾರಿಗಳನ್ನು ಪ್ರಾರಂಭವಾಗಿಲ್ಲ. ಕೆ.ಆರ್.ಐ.ಡಿ.ಎಲ್. 1 ಕಟ್ಟಡ ಕಾಮಗಾರಿ ಪೂರ್ಣಗೊಂಡಿದ್ದು, 10 ಪ್ರಗತಿಯಲ್ಲಿವೆ, 9 ಕಾಮಗಾರಿಗಳನ್ನು ಪ್ರಾರಂಭವಾಗಿಲ್ಲ ಎಂದು ಉಪನಿರ್ದೇಶಕಿ ಭಾರತಿ ಬಣಕಾರ್ ಸಭೆಯಲ್ಲಿ ಮಾಹಿತಿ ನೀಡಿದರು.

**ಅಪೌಷ್ಠಿಕ ಮಕ್ಕಳ ಚಿಕಿತ್ಸೆಗೆ ಸೂಚನೆ:** ಮಕ್ಕಳ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಿ, ಜಿಲ್ಲಾದ್ಯಂತ ತೀವ್ರ ಕಡಿಮೆ ತೂಕ ಹೊಂದಿರುವ ಮಕ್ಕಳನ್ನು ಗುರುತಿಸಬೇಕು. ಹೀಗೆ ಗುರುತಿಸಿದ ಮಕ್ಕಳಿಗೆ ಎನ್.ಆರ್.ಸಿ ಕೇಂದ್ರಗಳಿಗೆ ದಾಖಲಿಸಿ ವೈದ್ಯಕೀಯ ಚಿಕಿತ್ಸೆ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಒಟ್ಟು 144 ತೀವ್ರ ಕಡಿಮೆ ತೂಕದ ಮಕ್ಕಳು ಪತ್ತೆಯಾಗಿವೆ. ಇದುವರೆಗೂ 176 ಮಕ್ಕಳಿಗೆ ಎನ್.ಆರ್.ಸಿ ಕೇಂದ್ರಕ್ಕೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಅನಿಮಿಯಾದಿಂದ ಬಳಲುತ್ತಿರುವ ಮಕ್ಕಳಿಗೆ ಉಚಿತ ಔಷದೋಪಚಾರಗಳನ್ನು ನೀಡಲಾಗುತ್ತಿದೆ. ವಿಪರೀತ ಕಡಿಮೆ ತೂಕದ ಮಕ್ಕಳು ಎನ್.ಆರ್.ಸಿ ಕೇಂದ್ರಗಳಿಗೆ ದಾಖಲಾದರೆ 15 ದಿನ ಪ್ರೋಟಿನ್‌ಯುಕ್ತ ಆಹಾರ ನೀಡಿ ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡುವುದಾಗಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಅಭಿನವ್ ಸಭೆಯಲ್ಲಿ ತಿಳಿಸಿದರು.

ವಿಪರೀತ ಕಡಿಮೆ ತೂಕ ಹೊಂದಿದ ಮಕ್ಕಳಿಗೆ ಪ್ರತಿ ದಿನ ಒಂದುವರೆ ಪಟ್ಟು ಹೆಚ್ಚು ಆಹಾರವನ್ನು ನೀಡಲಾಗುತ್ತಿದೆ. ಇದರೊಂದಿಗೆ ವಾರಕ್ಕೆ 5 ಮೊಟ್ಟೆ ಹಾಗೂ 200 ಮಿ.ಲೀ ಹಾಲು ಸಹ ನೀಡಲಾಗುತ್ತಿದೆ ಎಂದು ಉಪನಿರ್ದೇಶಕಿ ಭಾರತಿ ಬಣಕಾರ್ ತಿಳಿಸಿದರು.

**22 ಬಾಲ್ಯವಿವಾಹ ತಡೆ, 12 ಪ್ರಕರಣಗಳಲ್ಲಿ ದೂರು ದಾಖಲು:** ಕಳೆದ ಅಕ್ಟೋಬರ್ ನಿಂದ ಡಿಸೆಂಬರ್‌ವರೆಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಬಾಲ್ಯ ವಿವಾಹ ಕುರಿತು 34 ದೂರು ಕೇಳಿ ಬಂದಿದ್ದವು. ಇವುಗಳಲ್ಲಿ 22 ಬಾಲ್ಯ ವಿವಾಹಗಳನ್ನು ತಡೆಯಲಾಗಿದೆ. 12 ಪ್ರಕರಣಗಳಲ್ಲಿ ಬಾಲ್ಯ ವಿವಾಹ ನಡೆದಿದ್ದು ಪೊಲೀಸ್ ದೂರು ನೀಡಿ ಎಫ್.ಐ.ಆರ್ ದಾಖಲಿಸಲಾಗಿದೆ. ಜಿಲ್ಲಾ ಸರ್ಕಾರಿ ಬಾಲಕರ ಬಾಲಮಂದಿರದಲ್ಲಿ 33, ಬಾಲಕಿಯರ ಬಾಲಮಂದಿರದಲ್ಲಿ 37 ಹಾಗೂ ಸರ್ಕಾರಿ ವೀಕ್ಷಣಾಲಯದಲ್ಲಿ 07 ಮಕ್ಕಳು ಆಶ್ರಯ ಪಡೆದಿದ್ದಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ ಸಭೆಯಲ್ಲಿ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ ಹಾಗೂ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಾಗಿದ್ದು, ಇವುಗಳನ್ನು ತಡೆಯಲು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸಬೇಕು. ಗ್ರಾಮಗಳಲ್ಲಿ ಕರ್ತವ್ಯ ನಿರ್ವಹಿಸುವ ಗ್ರಾಮ ಸಹಾಯಕರು, ನೀರುಗಂಟಿ, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಜಾಲ ಬಳಸಿ ಬಾಲ್ಯ ವಿವಾಹಗಳ ಕುರಿತು ಮಾಹಿತಿ ಪಡೆದುಕೊಳ್ಳಬೇಕು. ಪ್ರತಿ ಗ್ರಾಮಗಳಲ್ಲಿ ಮಹಿಳಾ ಮತ್ತು ಮಕ್ಕಳ ಕಾವಲು ಸಮಿತಿ ರಚಿಸಿ ತಪ್ಪದೆ ಸಭೆಗಳನ್ನು ನಡೆಸಬೇಕು. ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಬಾಲ್ಯ ವಿವಾಹ ಪ್ರಕರಣಗಳಲ್ಲಿ ಮುಲಾಜಿಲ್ಲದೇ ಪೊಲೀಸ್ ದೂರು ನೀಡಿ ಎಫ್.ಐ.ಆರ್ ದಾಖಲಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.

ಸಭೆಯಲ್ಲಿ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ, ಸಾಂತ್ವನ, ಸಖಿ ಒನ್ ಸ್ಟಾಪ್ ಸೆಂಟರ್‌ಗಳಲ್ಲಿ ದಾಖಲಾದ ದೂರುಗಳ ಕುರಿತು ಚರ್ಚಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಜಿ.ಪಂ. ಸಿಪಿಓ ಗಾಯತ್ರಿ, ಡಿಹೆಚ್‌ಓ ಡಾ.ರೇಣುಪ್ರಸಾದ್, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಶೀಲಾ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

---

# ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಕರ್ನಾಟಕ ದರ್ಶನ ಕಾರ್ಯಕ್ರಮ ಸಹಕಾರಿ: ಕೆ.ಎಸ್.ಸುರೇಶ್

» ಚಳ್ಳಕೆರೆ

ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಶಾಲಾ ಕೊಠಡಿಯಲ್ಲಿ ಬೋಧನೆಯೂ ಸೇರಿದಂತೆ ಇನ್ನಿತರ ಚಟುವಟಿಕೆಗಳನ್ನು ಶಿಕ್ಷಣ ಇಲಾಖೆ ಹಮ್ಮಿಕೊಂಡಿದ್ದು ಇದರಿಂದ ವಿದ್ಯಾರ್ಥಿಗಳ ಜ್ಞಾನ ವಿಕಾಸಕ್ಕೆ ಹೆಚ್ಚು ಉಪಯುಕ್ತವಾಗುತ್ತದೆ. ಪ್ರತಿವರ್ಷವೂ ಪ್ರವಾಸೋದ್ಯಮ ಇಲಾಖೆ ಮತ್ತು ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ಕರ್ನಾಟಕ ದರ್ಶನ ಕಾರ್ಯಕ್ರಮ ವಿದ್ಯಾರ್ಥಿಗಳಿಗೆ ಹೆಚ್ಚು ಪ ಂ ಯೋ ಗ ವಾ ಗು ತ್ತ ದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.



ಅವರು, ಮಂಗಳವಾರ ಕಾರ್ಯಾಲಯದ ಆವರಣದಲ್ಲಿ ಕರ್ನಾಟಕ ದರ್ಶನ ಪ್ರವಾಸಕ್ಕೆ ಹೊರಟ ವಿದ್ಯಾರ್ಥಿಗಳಿಗೆ ಶುಭಹಾರೈಸಿ ಮಾತನಾಡಿದರು. ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಲು ನುರಿತ ವಿಷಯ ಶಿಕ್ಷಕರನ್ನು ಸಹ ನೇಮಕ ಮಾಡಲಾಗಿರುತ್ತದೆ. ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಮಾತ್ರ ಈ ಸೌಲಭ್ಯ ದೊರೆಯುತ್ತದೆ. ಪ್ರತಿವರ್ಷ ಕರ್ನಾಟಕ ದರ್ಶನ ಮೂಲಕ ರಾಜ್ಯದ ವಿವಿಧ ಪ್ರದೇಶಗಳಿಗೆ ಮಕ್ಕಳನ್ನು ಕರೆದೊಯಲಾಗುತ್ತದೆ. ವಿಶೇಷವಾಗಿ ಎಸ್ಸಿ, ಎಸ್ಟಿ ವಿದ್ಯಾರ್ಥಿಗಳು ಈ ಪ್ರವೇಶಕ್ಕೆ ಅರ್ಹರು. ಪ್ರಸ್ತುತ ತಾಲ್ಲೂಕಿನ 48 ಪ್ರೌಢಶಾಲೆಗಳ 203 ವಿದ್ಯಾರ್ಥಿಗಳು ಮೂರು ದಿನಗಳ ಪ್ರವಾಸದಲ್ಲಿ ಪಾಲ್ಗೊಂಡಿದ್ದಾರೆ. ಆಯಾ ಎಸ್‌ಡಿಎಂಸಿ ಅಧ್ಯಕ್ಷ, ಶಾಲೆಯ ಮುಖ್ಯೋಪಾಧ್ಯಾಯರು ಆಯ್ಕೆ ಮಾಡಿದ ವಿದ್ಯಾರ್ಥಿಗಳ ಪ್ರವಾಸಕ್ಕೆ ಪರಿಗಣಿಸಲಾಗುವುದು.

ಪ್ರವಾಸೋದ್ಯಮ ಇಲಾಖೆ ಪ್ರತಿಯೊಬ್ಬ ವಿದ್ಯಾರ್ಥಿಯೂ ಪ್ರವಾಸದ ಸಂದರ್ಭದಲ್ಲಿ ವಿಶೇಷ ಕಿಟನ್ನು ನೀಡಲಿದ್ದು,ಕಿಟ್‌ನಲ್ಲಿ ವಿದ್ಯಾರ್ಥಿಗಳಿಗೆ ದಿನಬಳಕೆ ವಸ್ತುಗಳು ಇರಲಿವೆ. ಪ್ರತಿಬಸ್‌ಗೂ ಉಸ್ತುವಾರಿಯಾಗಿ ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಶಿಕ್ಷಕರನ್ನು ನೇಮಿಸಲಾಗಿದೆ, ಹಳೇಬೀಡು, ಬಾಗಮಂಡಲ, ಮಡಿಕೇರಿ, ಮೈಸೂರು, ಶ್ರವಣಬೆಳಗೊಳ ಬೆಂಗಳೂರು ಮುಂತಾದ ಪ್ರವಾಸಿತಾಣಗಳಿಗೆ ವಿದ್ಯಾರ್ಥಿಗಳನ್ನು ಕರೆದ್ಯೊಯಲಾಗುವುದು ಎಂದರು.

ಎಚ್‌ಟಿಟಿ ಪ್ರೌಢಶಾಲೆ ಮುಖ್ಯ ಶಿಕ್ಷಕ ವೀರಣ್ಣ, ಸದಾಶಿವಪ್ಪ, ರಾಧಾಮಣಿ, ಪ್ರವಾಸೋದ್ಯಮ ಇಲಾಖೆ ಸಂಯೋಜಕ ಅನಿಲ್, ಚನ್ನಬಸಪ್ಪ, ನಾಗರಾಜ ಹಾಗೂ ಪೋಷಕರು ಉಪಸ್ಥಿತರಿದ್ದರು.

---

### ಮಾರಿಕಾಂಭ ದೇವಾಲಯದ ಜೀರ್ಣೋದ್ದಾರಕ್ಕೆ ಆರ್ಥಿಕ ನೆರವು



» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿಯೋಜನೆ ಗ್ರಾಮೀಣ ಭಾಗದ ಪುರಾತನ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಆರ್ಥಿಕ ನೆರವು ನೀಡುವ ಮೂಲಕ ದೇವಸ್ಥಾನಗಳ ರಕ್ಷಣೆಗೆ ಮುಂದಾಗಿದೆ. ದೇವರಲ್ಲಿ ಅಪಾರವಾದ ಭಕ್ತಿ, ಶ್ರದ್ಧೆ ಇರುವ ಜನರ ಭಾವನೆಗೆ ತಕ್ಕಂತೆ ದೇವಸ್ಥಾನಗಳನ್ನು ಉಳಿಸಿ, ಬೆಳೆಸಬೇಕಿದೆ. ಈ ಪರಂಪರೆಯನ್ನು ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ದಿಯೋಜನೆ ನಿರಂತರವಾಗಿ ಮುಂದುವರೆಯಲಿದೆ ಎಂದು ತಾಲ್ಲೂಕು ಯೋಜನಾಧಿಕಾರಿ ಎಂ.ಶಶಿಕಲಾ ತಿಳಿಸಿದರು.

ಅವರು, ತಾಲ್ಲೂಕಿನ ಮೀರಸಾಬಿಹಳ್ಳಿ ಗ್ರಾಮದ ಮಾರಿಕಾಂಭ ದೇವಸ್ಥಾನದ ಆಡಳಿತ ಮಂಡಳಿ ಮನವಿ ಮೇರೆಗೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯಿಂದ 2ಲಕ್ಷ ಮೊತ್ತದ ಡಿಡಿಯನ್ನು ದೇವಸ್ಥಾನದ ಆಡಳಿತಮಂಡಳಿಗೆ ಹಸ್ತಾಂತರ ಮಾಡಿದರು. ಈ ಹಣವನ್ನು ಸದ್ವಿನಿಯೋಗ ಪಡಿಸಿಕೊಂಡು ಭಕ್ತರಿಗೆ ಉತ್ತಮ ಸೇವೆ ನೀಡುವಂತೆ ಮನವಿ ಮಾಡಿದರು. ಡಿಡಿಯನ್ನು ಸ್ವೀಕರಿಸಿದ ದೇವಸ್ಥಾನದ ಟ್ರಸ್ಟ್ ಅಧ್ಯಕ್ಷ ಶಿವಣ್ಣ, ಗ್ರಾಮದ ಪುರಾತನ ದೇವಸ್ಥಾನಗಳಲ್ಲಿ ಒಂದಾಗ ಮಾರಿಕಾಂಭ ದೇವಸ್ಥಾನದ ಜೀರ್ಣೋದ್ದಾರಕ್ಕಾಗಿ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಎರಡು ಲಕ್ಷ ಮೊತ್ತದ ಡಿಡಿಯನ್ನು ಸ್ವೀಕರಿಸಿದ್ದೇವೆ. ಈ ಹಿಂದೆಯೂ ಸಹ 3 ಲಕ್ಷ ಡಿಡಿಯನ್ನು ನೀಡಿದ್ದು ನಮ್ಮ ಗ್ರಾಮದ ದೇವಸ್ಥಾನಕ್ಕೆ ಒಟ್ಟು 5 ಲಕ್ಷ ಹಣವನ್ನು ನೀಡಲಾಗಿದೆ.

---

## ಪ್ರಮುಖ ಸುದ್ದಿ

# ನಮ್ಮ ನೆಲದ ಸಾಹಿತ್ಯ ಸಂಸ್ಕೃತಿ ಉಳಿಸುವ ಕೆಲಸವಾಗಬೇಕು

» ಹೊಸದುರ್ಗ

ಕಲೆ,ಸಾಹಿತ್ಯ,ಸಂಸ್ಕೃತಿ,ಆಚಾರ-ವಿಚಾರ ನಡೆ-ನುಡಿ ನೆಲ-ಜಲ ಇವುಗಳು ನಮ್ಮ ನಾಡಿನ ಸಂಪತ್ತು ಇವುಗಳನ್ನು ಉಳಿಸಿ ಬೆಳೆಸುವ ಕೆಲಸವಾಗ ಬೇಕು ಕಲೆ ಮತ್ತು ಕಲಾವಿದರನ್ನ ಗೌರವಿಸಬೇಕು ಎಂದು ಸಚ್ಚಿದಾನಂದ ಸೇವಾ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷ ಹಾಗೂ ಸಮಾಜ ಸೇವಕ ಬೆಂಗಳೂರಿನ ಬಸವರಾಜು ಅಭಿಪ್ರಾಯಿಸಿದರು.

ಪಟ್ಟಣದ ಜಂಗಮ ನಗರದ ಜಮುರಾ ನಾಗರಾಜ್‌ಕಲಾ ಮಂದಿರದಲ್ಲಿ ಶ್ರೀ ಸಚ್ಚಿದಾನಂದ ಸೇವಾ ಟ್ರಸ್ಟ್ ರಿ ಬೆಂಗಳೂರು ಇವರ ವತಿಯಿಂದ ಆಯೋಜಿಸಲಾಗಿದ್ದ ತಾಲ್ಲೂಕಿನ ವಿವಿಧ ಕ್ಷೇತ್ರಗಳಲ್ಲಿ ತಮ್ಮ ಕಲಾ ಸೇವೆ ಯನ್ನು ಸಲ್ಲಿಸುತ್ತಿರುವ ಕಲಾವಿದರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಮ್ಮ ದುಡಿಮೆಯ ಸ್ವಲ್ಪ ಭಾಗದ ಹಣವನ್ನು ನಾಡಿನ ವಿವಿಧ ಕಡೆ ಯಾವುದೇ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಹ ನೀಡುವ ಕೆಲಸ ಮಾಡುತ್ತಾ ಬಂದಿದೆ, ಮುಂದೆಯೂ ಸಹಾ ಮಾಡುತ್ತದೆ ಎಂದರು.



ಎಸ್. ನಿಜಲಿಂಗಪ್ಪ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಕೆ. ಎಸ್. ಕಲ್ಮಠ್ ಮಾತನಾಡಿ ಕಲಾವಿದರು ಮತ್ತು ಅವರ ಕಲಾಪ್ರಕಾರಗಳು ಜಾತ್ಯತೀತ ವಾಗಿರುವಂತದ್ದು ಕಲಾವಿದ ಆರ್ಥಿಕವಾಗಿ ತುಂಬಾ ಸಂಕಷ್ಟಗಳಲ್ಲಿದ್ದು ಅವರ ಹಸಿವು ನೀಗಿಸುವ ಕೆಲಸ ಇಂತಹ ಕಾರ್ಯಕ್ರಮಗಳ ಮೂಲಕ ಆಗ ಬೇಕೆಂದು ಅಭಿಪ್ರಾಯಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಹಿರಿಯ ರಂಗ ಕಲಾವಿದ ಜಮುರ ನಾಗರಾಜ್ ಕಲೆಗೆ ಮತ್ತು ಕಲಾವಿದನಿಗೆ ಎಲ್ಲರೂ ಸಹಾ ಪ್ರೋತ್ಸಹಿಸುವ ಕೆಲಸವಾಗಬೇಕು ಹಾಗೆಯೇ ಕಲಾವಿದರಿಗೆ ಸರ್ಕಾರ ನೆರವಿಗೆ ಬರಬೇಕು ಎಂದು ಅವರು ಮನವಿ ಮಾಡಿದ ಅವರು ಕಲಾವಿದರನ್ನು ಸಚ್ಚಿದಾನಂದ ಸೇವಾ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷರಾದ ಬಸವರಾಜು ಅವರು ಗುರುತಿಸಿ ಅವರಿಗೆ ಸನ್ಮಾನ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ತಾಲೂಕು ಕ.ಸಾ.ಪ ಅಧ್ಯಕ್ಷ ಬಿ.ಪಿ.ಓಂಕಾರಪ್ಪ, ಕನ್ನಡ ಜಾನಪದ ಪರಿಷತ್‌ನ ಜಿಲ್ಲಾಧ್ಯಕ್ಷ ಬಿ ಮೈಲಾರಪ್ಪ. ಸಮಾಜ ಸೇವಕಿ ಸಿಂಧು ಅಶೋಕ್ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಪತ್ರಕರ್ತ ಆನಿವಾಳನಾಗರಾಜ್, ಕಲಾವಿದರಾದ ಎಂ.ಬಿ.ಕುಮಾರಸ್ವಾಮಿ, ಸುಜಾತ, ರಾಜಗೋಪಾಲ್, ಪೀಲಾಪುರ ಆರ್ ಕಂಠೇಶ್, ಸುಬ್ರಮಣಿ,ರೇಷ್ಮೆ ಇಲಾಖೆಯ ನಿವೃತ್ತ ಅಧಿಕಾರಿ ಪುಟ್ಟಸ್ವಾಮಿ, ಚಿತ್ರಕಲಾವಿದ ಕುಮಾರಸ್ವಾಮಿ ,ರೈತ ಕವಿ ರೊಪ್ಪದ ಬಸವಣ್ಣ,ಜಾದೂ ಮೋಹನ್ ಕುಮಾರ್, ಜೂನಿಯರ್ ಅಂಬರೀಷ್ ಸುರೇಶ್, ಶಿಲ್ಪಕಲಾವಿದ ತ್ಯಾಗರಾಜ್, ಚಿತ್ರಕಲಾವಿದ ಚಂದ್ರು, ಅಶ್ವಿನಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸೇವೆ ಸಲ್ಲಿಸಿದ ಸುಮಾರು 50 ಕ್ಕೂ ಹೆಚ್ಚು ಮಂದಿ ಕಲಾವಿದರನ್ನ ಸನ್ಮಾನಿಸಿ ಗೌರವಿಸಲಾಯಿತು.

## ಫಾಸ್ಟ್ ನ್ಯೂಸ್

### ಫೆ.೦೫ರಂದು ನೇರ ಫೋನ್ ಇನ್

» ಚಿತ್ರದುರ್ಗ

ಶಾಲಾ ಶಿಕ್ಷಣ ಇಲಾಖೆ ಹಾಗೂ ಪ್ರಸಾರ ಭಾರತಿ ಆಕಾಶವಾಣಿ ಸಹಯೋಗದಲ್ಲಿ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಮಕ್ಕಳ ಫಲಿತಾಂಶ ಸುಧಾರಣೆಗಾಗಿ ಇದೇ ಫೆ.05ರಂದು ಬೆಳಿಗ್ಗೆ 10ಕ್ಕೆ ಆಂಗ್ಲಭಾಷೆಗೆ ಸಂಬಂಧಿಸಿದಂತೆ ನೇರ ಫೋನ್ ಇನ್ ಸರಣಿಯು ಪ್ರಸಾರವಾಗಲಿದೆ. ಫೋನ್ ಇನ್ ಕಾರ್ಯಕ್ರಮದಲ್ಲಿ ಆಂಗ್ಲ ಭಾಷೆಯ ವಿಷಯ ಪರಿವೀಕ್ಷಕ ಎಚ್.ಟಿ.ಚಂದ್ರಣ್ಣ, ಸಂಪನ್ಮೂಲ ವ್ಯಕ್ತಿಗಳಾದ ಚಿಕ್ಕಗೊಂಡನಹಳ್ಳಿ ಸರ್ಕಾರಿ ಪ್ರೌಢಶಾಲೆಯ ಸಹ ಶಿಕ್ಷಕ ಟಿ.ಸಂತೋಷ್, ಜಿ.ಆರ್.ಹಳ್ಳಿ ಸಹ ಶಿಕ್ಷಕ ಹೆಚ್.ಕೆ.ಮಹೇಶ್ ಭಾಗವಹಿಸುವರು. ಮಕ್ಕಳು ಹಾಗೂ ಪೋಷಕರು ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಭಾಗವಹಿಸಲು 9448640273 ಹಾಗೂ 9141970272 ಗೆ ಕರೆ ಮಾಡಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ನಿವೃತ್ತ ಸರ್ಕಾರಿ ನೌಕರರ ಸಂಘದ ರಜತ ಮಹೋತ್ಸವ



» ಹೊಳಲ್ಕೆರೆ

ಸಿಕ್ಕಿರುವ ಕೆಲಸವನ್ನು ದೇವರ ಸೇವೆ ಅಂದುಕೊಂಡು ಪ್ರಾಮಾಣಿಕವಾಗಿ ನಿಭಾಯಿಸಿದಾಗ ನಿಮಗೂ ನಿಮ್ಮ ಕುಟುಂಬಕ್ಕೂ ನೆಮ್ಮದಿ ಸಿಗುತ್ತದೆಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ಪಟ್ಟಣದ ಪ್ರಸನ್ನ ಗಣಪತಿ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ರಜತ ಮಹೋತ್ಸವ, ನಿವೃತ್ತ ನೌಕರರ ದಿನಾಚರಣೆ ಹಾಗೂ ಹಿರಿಯ ಅಜೀವ ಸದಸ್ಯರಿಗೆ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಸರ್ಕಾರಿ ನೌಕರರು, ಅಧಿಕಾರಿಗಳು, ರಾಜಕಾರಣಿಗಳು ಜೀವನದಲ್ಲಿ ಅನೇಕ ಸಮಸ್ಯೆ ಸವಾಲುಗಳನ್ನು ಎದುರಿಸಿ ಮುಂದೆ ಬರಬೇಕಿದೆ. ಸರ್ಕಾರಿ ನೌಕರರು ನಿವೃತ್ತಿಯ ನಂತರ ಕುಗ್ಗಬಾರದು. ಲವಲವಿಕೆಯಿಂದ ಇರಬೇಕು. ಸರ್ಕಾರಿ ಕೆಲಸದಲ್ಲಿದ್ದಾಗ ಸಮಾಜದ ಋಣ ತೀರಿಸಿದರೆ ಹುಟ್ಟಿದ್ದಕ್ಕೂ ಸಾರ್ಥಕವಾಗುತ್ತದೆ. ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಿಂದ ನೀವುಗಳು ನನ್ನನ್ನು ಮೂರು ಸಾರಿ ಗೆಲ್ಲಿಸಿದ್ದೀರ. ನಿಮ್ಮಗಳ ಋಣ ನನ್ನ ಮೇಲಿರುವುದರಿಂದ ಜವಾಬ್ದಾರಿಯನ್ನರಿತು ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆಂದು ನಿವೃತ್ತ ಸರ್ಕಾರಿ ನೌಕರರಿಗೆ ಭರವಸೆ ನೀಡಿದರು.

ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ಮಾತನಾಡಿ ಸಂವಿಧಾನದಡಿ ಮೂಲಭೂತ ಹಕ್ಕು ಎಷ್ಟು ಮುಖ್ಯವೋ. ಮೂಲಭೂತ ಕರ್ತವ್ಯಕ್ಕೂ ಅಷ್ಟೆ ಪ್ರಾಮುಖ್ಯತೆಯಿದೆ ಎನ್ನುವುದನ್ನು ಗಮನದಲ್ಲಿಟ್ಟುಕೊಂಡು ಸರ್ಕಾರಿ ನೌಕರರು ಕೆಲಸ ಮಾಡಬೇಕಿದೆ. ಸರ್ಕಾರಿ ನೌಕರಿಯಲ್ಲಿರುವವರಿಗೆ ನಿರ್ಧಿಷ್ಟವಾದ ಚೌಕಟ್ಟಿದೆ. ನಿವೃತ್ತಿಯ ನಂತರ ಸ್ವತಂತ್ರ ಜೀವಿಯಿದ್ದಂತೆ. ನಾನು ವಕೀಲನಾಗಿದ್ದಾಗ ಎಲ್ಲರೊಂದಿಗೆ ಆತ್ಮೀಯತೆಯಿಂದಿದ್ದೆ. ನ್ಯಾಯಾಧೀಶನಾಗಿದ್ದಾಗ ಪಂಜರದ ಪಕ್ಷಿಯಂತಿದ್ದೆ. ಯಾರ ಬಳಿಯೂ ಮಾತನಾಡುವಂತಿರಲಿಲ್ಲ. ಮದುವೆ ಇನ್ನಿತರೆ ಶುಭ ಸಮಾರಂಭಗಳಿಗೆ ಹೋಗುವುದು ಕಷ್ಟವಾಗಿತ್ತು. ನಿವೃತ್ತಿಯಾದಾಗಿನಿಂದಲೂ ನೆಮ್ಮದಿಯಾಗಿದ್ದೇನೆ. ವೇದ ಶಾಸ್ತ್ರ, ಪುರಾಣ, ಗ್ರಂಥ, ಬೈಬಲ್ ಎಲ್ಲವೂ ಇದೆ. ಆದರೂ ಮನುಷ್ಯ ಜೀವನ ಹೇಗೆ? ಏನು ಎನ್ನುವುದನ್ನು ತಿಳಿದುಕೊಳ್ಳಬೇಕೆಂದರು. ನಿಮ್ಮ ಸಂಘದಲ್ಲಿ ಗ್ರಂಥಾಲಯವನ್ನು ತೆರೆದು ಪ್ರತಿನಿತ್ಯವೂ ದಿನಪತ್ರಿಕೆಗಳನ್ನು ಓದುವ ಹವ್ಯಾಸ ರೂಢಿಸಿಕೊಳ್ಳಿ. ಇದರಿಂದ ಸಾಕಷ್ಟು ವಿಚಾರಗಳು ತಿಳಿಯುತ್ತದೆ. ಕುವೆಂಪು ಜಿ.ಎಸ್.ಶಿವರುದ್ರಪ್ಪ, ದ.ರಾ.ಬೇಂದ್ರೆಯವರ ಪುಸ್ತಕ, ಕಥೆ, ಕಾದಂಬರಿಗಳ ಜೊತೆ ಇಂಗ್ಲಿಷ್ ಪತ್ರಿಕೆಗಳನ್ನು ಓದಿ ಎಂದು ನಿವೃತ್ತ ಸರ್ಕಾರಿ ನೌಕರರಿಗೆ ಹೆಚ್.ಬಿಲ್ಲಪ್ಪ ಸಲಹೆ ನೀಡಿದರು. ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎ.ಸಿ.ಗಂಗಾಧರಪ್ಪ, ಜಿಲ್ಲಾ ಸಂಘದ ಗೌರವಾಧ್ಯಕ್ಷ ಹೆಚ್.ಶಿವಲಿಂಗಪ್ಪ, ಜಿಲ್ಲಾಧ್ಯಕ್ಷ ಆರ್.ರಂಗಪ್ಪರೆಡ್ಡಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ತಿಪ್ಪೇಶಪ್ಪ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎ.ಶಿವಮೂರ್ತಿ, ಏಕಾಂತಪ್ಪ, ಮಂಜುನಾಥ್, ಓಂಕಾರಪ್ಪ, ಕರ್ನಾಟಕ ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಸದಸ್ಯರುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



**ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಸವಿತಾ ಮಹರ್ಷಿ ಜಯಂತಿಯಲ್ಲಿ ಶಾಸಕ ಡಾ. ಎಂ.ಚಂದ್ರಪ್ಪ ಮಹರ್ಷಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು.**

# ಸವಿತಾ ಸಮಾಜ ಬಾಂಧವರು ಶ್ರಮ ಜೀವಿಗಳು

» ಚಿತ್ರದುರ್ಗ

ಸವಿತಾ ಸಮಾಜ ಬಾಂಧವರು ಶ್ರಮ ಹಾಗೂ ಕಾಯಕ ಜೀವಿಗಳಾಗಿದ್ದಾರೆ. ಆಧುನಿಕ ಯುಗದಲ್ಲಿ ಪ್ರತಿಯೊಬ್ಬರೂ ಸುಂದರವಾಗಿ ಕಾಣುತ್ತಿದ್ದಾರೆ ಎಂದರೆ, ಇದರ ಹಿಂದೆ ಸವಿತಾ ಸಮಾಜದವರ ಶ್ರಮ ಅಡಿಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ, ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಸವಿತಾ ಮಹರ್ಷಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ವೃತ್ತಿ ಹಾಗೂ ಪ್ರವೃತ್ತಿಗಳು ಬೇರೆ, ಹಳೆಯ ಪದ್ಧತಿಗಳಿಗೆ ಜೋತು ಬೀಳದೆ, ಸವಿತಾ ಸಮಾಜ ಬಾಂಧವರು ಇತರೆ ವೃತ್ತಿಗಳ ಕಡೆಗೂ ಮುಖ ಮಾಡಬೇಕು. ಸಣ್ಣ ಸಮಾಜಗಳು ಅಭಿವೃದ್ಧಿ ಹೊಂದಿ ಮುಖ್ಯವಾಹಿನಿಗೆ ಬರಲು, ಸರ್ಕಾರ ಶೈಕ್ಷಣಿಕ ಹಾಗೂ ಔದ್ಯೋಗಿಕವಾಗಿ ಮೀಸಲಾತಿ ನೀಡಿದೆ. ಈ ಅವಕಾಶಗಳನ್ನು ಬಳಸಿಕೊಂಡು ಸಮಾಜದ ಇತರೆ ಮಕ್ಕಳಂತೆ ನಿಮ್ಮ ಮಕ್ಕಳು ಸಹ ಪ್ರಗತಿ ಹೊಂದಬೇಕು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಾಸ್ಟೆಲ್ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ತೆರೆಯಲಾಗಿದೆ ಎಂದರು.



ಶೈಕ್ಷಣಿಕವಾಗಿ ಮಕ್ಕಳು ಅಭಿವೃದ್ಧಿ ಹೊಂದಿದರೆ, ಮನೆಯ ವಾತಾವರಣ ಬದಲಾಗುತ್ತದೆ. ಕೌಶಲ್ಯ ಅಭಿವೃದ್ಧಿ ಇಲಾಖೆಯಿಂದವೃತ್ತಿಸಂಬಂಧಿತನಾವಿನ್ಯತೆ ಗಳಿಸಲು ತರಬೇತಿ ನೀಡಲಾಗುತ್ತದೆ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಲವಾರು ಯೋಜನೆಗಳಿಗೆ ಸಬ್ಸಿಡಿಯೊಂದಿಗೆ ಸಾಲ ಸೌಲಭ್ಯ ನೀಡಲಾಗುತ್ತಿದೆ.

ಇದರಸದುಯೋಗಪಡಿದುಕೊಳ್ಳಬೇಕು. ಜಾತಿ ಮೂಲದಿಂದ ಇನ್ನೊಬ್ಬರನ್ನು ನಿಂದಿಸಿದರೆ ಮನಸ್ಸಿಗೆ ಬಹಳಷ್ಟು ದುಃಖವಾಗುತ್ತದೆ. ಸಾರ್ವಜನಿಕರು ಇದನ್ನು ಅರಿತು ಯಾರ ಮನಸ್ಸಿಗೂ ನೋವಾಗದಂತೆ ಮಾತನಾಡಬೇಕು. ಪರಿಶಿಷ್ಟ ಜಾತಿ ಪಟ್ಟಿಗೆ ಸವಿತಾ ಸಮಾಜವನ್ನು ಸೇರಿಸುವ ಸಲುವಾಗಿ ನೀಡಿದ ಮನವಿಯನ್ನು ಸರ್ಕಾರಕ್ಕೆ ಕಳುಹಿಸುವುದಾಗಿ ಹೇಳಿದರು.

ಸಮಾಜದ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್ ಮಾತನಾಡಿ, ಸವಿತಾ ಮಹರ್ಷಿ ಸವಿತಾ ಸಮಾಜ ಮೂಲ ಪುರುಷ. ಬ್ರಹ್ಮನ ಕಣ್ಣಿನಿಂದ ಜನಿಸಿದ ಇವರು, ಮದುವೆಗೆ ಪರಶಿವನನ್ನು ಶೃಂಗರಿಸಿ ಎಲ್ಲರ ಮೆಚ್ಚುಗೆ ಪಡೆದರು. ಸಂಗೀತದಲ್ಲೂ ಸಹ ಹೆಸರಾದವರು. ಇಂದಿಗೂ ಸಮಾಜ ಬಾಂಧವರು ಕುಲವೃತ್ತಿಯನ್ನು ನಂಬಿ ಬದುಕುತ್ತಿದಾರೆ. ಸಮಾಜದಲ್ಲಿ ಕಟ್ಟ ಕಡೆಯ ವ್ಯಕ್ತಿಗಳಾಗಿ ಜೀವನ ಸಾಗಿಸುತ್ತಿದ್ದಾರೆ. ಸರ್ಕಾರ ಸವಿತಾ ಸಮಾಜವನ್ನು ಪರಿಶಿಷ್ಟ ಜಾತಿಗಳ ಪಟ್ಟಿ ಸೇರಿಸಬೇಕು ಎಂದು ಒತ್ತಾಯಿಸಿದರು.

ಸಾಹಿತಿ ಹುರಳಿ ಎಂ.ಬಸವರಾಜ್ ಮಾತನಾಡಿ, ಈ ಹಿಂದೆ ಹಳ್ಳಿಗಳಲ್ಲಿ ಸವಿತಾ ಸಮಾಜ ಬಾಂದವರು ಇತರರೊಂದಿಗೆ ಅನ್ಯೋನ್ಯತೆಯಿಂದ ಬಾಳುತ್ತಿದ್ದರು. ರೈತರು ತಾವು ಬೆಳೆದ ಬೆಳೆಗಳಲ್ಲಿ ಇವರಿಗೂ ಪಾಲು ನೀಡುತ್ತಿದ್ದರು. ಊರಿನ ಪ್ರತಿ ಮನೆಯ ಮಾಹಿತಿ ಕ್ಷೌರದ ಅಂಗಡಿಗಳಲ್ಲಿ ದೊರೆಯುತ್ತಿತ್ತು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಸವಿತಾ ಸಮಾಜ ಅಧ್ಯಕ್ಷ ಎನ್.ಚಂದ್ರಶೇಖರ್, ಜಿಲ್ಲಾ ಕಾರ್ಯಾಧ್ಯಕ್ಷ ಎನ್.ಶ್ರೀನಿವಾಸ್, ತಾಲ್ಲೂಕು ಅಧ್ಯಕ್ಷ ಆರ್.ಶ್ರೀನಿವಾಸ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಆರ್.ನಾಗರಾಜ್ ಸೇರಿದಂತೆ ಸವಿತಾ ಸಮಾಜದ ಮುಖಂಡರು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಓ.ಮೂರ್ತಿ ಮತ್ತು ಸಂಗಡಿಗರು ಗೀತಗಾಯನ ಪ್ರಸ್ತುತ ಪಡಿಸಿದರು.

# ನಮ್ಮ ಮಕ್ಕಳನ್ನ ವಿದ್ಯಾವಂತರನ್ನಾಗಿ ಮಾಡಿ


» ಹೊಸದುರ್ಗ

ನಮ್ಮ ಮಡಿವಾಳ ಸಮಾಜ ಶೈಕ್ಷಣಿಕವಾಗಿ, ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಹಿಂದುಳಿದಿದೆ,ನಮ್ಮಮಕ್ಕಳನ್ನವಿದ್ಯಾವಂತರನ್ನಾಗಿ ಮಾಡುವುದು ನಮ್ಮೆಲ್ಲರ ಕರ್ತವ್ಯ, ಯಾರೂ ಸಹಾ ಶಿಕ್ಷಣದಿಂದ ವಂಚಿತರಾಗಬಾರದು ಎಂದು ತಾಲೂಕು ಶ್ರೀ ವೀರ ಮಡಿವಾಳ ಮಾಚಿದೇವ ಸಂಘದ ಅಧ್ಯಕ್ಷ ಬಿ.ಆರ್.ರಾಮಕೃಷ್ಣ ಕರೆ ನೀಡಿದರು.


ಪಟ್ಟಣದ ಶ್ರೀ ವೀರ ಮಡಿವಾಳ ಮಾಚಿದೇವ ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದ ಮಡಿವಾಳಮಾಚಿದೇವಜಯಂತಿಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಘಟನೆ ಮಾಡಿ ಸಮಾಜ ಮುಖಿಯಾದ ಕೆಲಸ ಮಾಡುವುದು ಅಷ್ಟೊಂದು ಸುಲಭದ ಮಾತಲ್ಲ ಯಾರೇ ಎನೇ ಅಂದರೂ ಅವುಗಳನ್ನ ಸಹಿಸಿಕೊಂಡು ಸಮಾಜವನ್ನ ಮುನ್ನಡೆಸುವ ಕೆಲಸವಾಗಬೇಕು ಎಂದರು.

ನಿವೃತ್ತ ಶಿರಸ್ತೆದಾರರು ಮತ್ತು ಸಮಾಜದ ಮುಖಂಡರಾದ ಆರ್.ಜಯಣ್ಣ ಮಾತನಾಡಿ ರಾಜ್ಯದಲ್ಲಿ ಮಡಿವಾಳ ಜನಾಂಗವನ್ನು ಪರಿಶಿಷ್ಟ ಜಾತಿಗೆ ಸೇರ್ಪಡೆ ಮಾಡಲು ಕುಲಶಾಸ್ತ್ರೀಯ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಮೈಸೂರು ವಿಶ್ವವಿದ್ಯಾಲಯದ ಪ್ರೋ.ಅನ್ನಪೂರ್ಣಮ್ಮ ಅವರನ್ನು ನೇಮಕ ಮಾಡಲಾಗಿತ್ತು.ಅವರು 2000 ನೇ ಇಸವಿಯಲ್ಲಿಯೇ ರಾಜ್ಯ ಸರಕಾರಕ್ಕೆ ವರದಿ ಸಲ್ಲಿಸಿದ್ದಾರೆ.ಆದರೆ ರಾಜ್ಯ ಸರಕಾರ ಈ ವರದಿಯನ್ನು ಕೇಂದ್ರ ಸರಕಾರಕ್ಕೆ ಶಿಪಾರಸ್ಸು ಮಾಡಲು ಮೀನಮೇಶ ಎಣಿಸುತ್ತಿದೆ ಎಂಬ ವಿಷಾದ ವ್ಯಕ್ತಪಡಿಸಿದರು.ಕಾರ್ಯಕ್ರಮದಲ್ಲಿ ಕೆಲ್ಲೋಡು ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಮಂಜಪ್ಪ, ಸಮಾಜದ ಮುಖಂಡರುಗಳಾದ ನಾಗತಿಹಳ್ಳಿಮಂಜುನಾಥ್, ಮಾಡದಕೆರೆ ರೇವಣ್ಣ, ಸ್ಟುಡಿಯೋಬಸವರಾಜ್, ನೇರಲಕೆರೆರಾಮಣ್ಣ, ಬಾಗೂರುಮಲ್ಲೇಶಪ್ಪ, ನೇರಲಕೆರೆರಂಗನಾಥ್ ಸೇರಿದಂತೆ ಸಮಾಜದ ಬಂಧುಗಳು ಉಪಸ್ಥಿತರಿದ್ದರು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಶ್ರೀ ವೀರ ಮಡಿವಾಳ ಮಾಚಿದೇವ ಸ್ವಾಮಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.



## ಮಂಜುನಾಥ್‌ಗೆ ಶ್ರದ್ಧಾಂಜಲಿ



» ಚಿತ್ರದುರ್ಗ

ಸಮಾಜಕ್ಕೆ ಏನಾದರೂ ಮಾಡಬೇಕೆಂದು ಸದಾ ಹಂಬಲವನ್ನು ನನ್ನದೊಂದಿಗೆ ವ್ಯಕ್ತಪಡಿಸುತ್ತಿದ್ದವರು ಮಂಜುನಾಥ್ ಎಂದು ರಾಜ್ಯ ಸಭಾ ಮಾಜಿ ಸದಸ್ಯರಾದ ಹೆಚ್. ಹನುಮಂತಪ್ಪ ವ್ಯಕ್ತಪಡಿಸಿದರು.

ಚಿತ್ರದುರ್ಗ ಎಸ್ ನಿಜಲಿಂಗಪ್ಪ ಸ್ಮಾರಕದ ಧರ್ಮದರ್ಶಿ ಎಸ್.ಜಿ. ಮಂಜುನಾಥ ಅವರ ನಿಧನದ ಅಂಗವಾಗಿ ಸೀಬಾರದ ಎಸ್ ನಿಜಲಿಂಗಪ್ಪ ಸ್ಮಾರಕದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಹನುಮಂತಪ್ಪರವರು, ಮಂಜುನಾಥ್‌ರವರ ಕಡಾ ಖಂಡಿತವಾದಿಯಾಗಿದ್ದರು, ಅವರು ಅಂದುಕೊಂಡಿದ್ದು ಆಗಲೇಬೇಕಿತ್ತು ಇವರು ನಿಜಲಿಂಗಪ್ಪರವರ ಫೌಂಡೇಷನ್‌ನ್ನು ಹುಟ್ಟು ಹಾಕುವುದರ ಮೂಲಕ ಚಿತ್ರದುರ್ಗ ಹಾಗೂ ಬೆಂಗಳೂರಿನಲ್ಲಿ ಉತ್ತಮವಾದ ಕೆಲಸವನ್ನು ಮಾಡಿದ್ದಾರೆ.

ಏಕೀಕೃತ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷರಾಗಿದ್ದ ಎಸ್ ಗುರುನಾಥಪ್ಪ ಅವರ ಪುತ್ರರಾಗಿದ್ದು,ಪತ್ರಿಕಾ ಪ್ರತಿನಿಧಿಯಾಗಿ, ಚಿತ್ರದುರ್ಗ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಬೆಂಗಳೂರಿನ ಶ್ರೀ ಎಸ್. ನಿಜಲಿಂಗಪ್ಪ ಫೌಂಡೇಷನ್‌ನ ಕಾರ್ಯದರ್ಶಿ, ಕರ್ನಾಟಕ ಫಿಲಂಸ್ ಕಾರ್ಯದರ್ಶಿಯಾಗಿ ಚಿತ್ರದುರ್ಗ ಎಸ್ ನಿಜಲಿಂಗಪ್ಪ ಮೆಮೋರಿಯಲ್ ಟ್ರಸ್ಟ್ ನಿರ್ದೇಶಕರಾಗಿ ಕೆಲಸ ನಿರ್ವಹಿಸಿದ್ದಾರೆ. ಇದ್ದಲ್ಲದೆ ಸಿಬಾರದ ಈ ಪುಣ್ಯ ಭೂಮಿಗೆ ನನ್ನನ್ನು ಕಾರ್ಯದರ್ಶಿಯನ್ನಾಗಿ ಮಾಡಿ ಟ್ರಸ್ಟ್‌ನಲ್ಲಿ ಇರುವಂತೆ ಮಾಡಿದ್ದಾರೆ ಎಂದು ಅವರ ಕಾರ್ಯವನ್ನು ಸ್ಮರಿಸಿದರು.

ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಅಧಿಕಾರಿಯಾದ ಡಿ.ಎಂ.ಶ್ರೀಧರ್ ಮಾತನಾಡಿ, ಮಂಜುನಾಥ್ ಹಾಗು ನಮ್ಮ ಒಡನಾಟ ಕಳೆದ 40 ವರ್ಷಗಳಿಂದ ಇದೆ. ಚಿತ್ರದುರ್ಗದಲ್ಲಿ ದಿ.ನಿಜಲಿಂಗಪ್ಪರವರ ಟ್ರಸ್ಟ್ ನಿರ್ಮಾಣ ವಾಗಲು ಇದ್ದಲ್ಲದೆ ನಿಜಲಿಂಗಪ್ಪರವರ ಸ್ಮಾರಕ ನಿರ್ಮಾಣವಾಗಲು ಅವರನ್ನು ಒಪ್ಪಿಸಲು ಪ್ರಮುಖವಾಗಿ ಇವರು ಕಾರಣರಾಗಿದ್ದಾರೆ. ಇದ್ದಲ್ಲದೆ ಇವರು ಸರಳ ಹಾಗೂ ಸಜ್ಜನಿಕೆಯ ವ್ಯಕ್ತಿಯಾಗಿದ್ದರು ಎಂದರು. ಇದೇ ಸಂದರ್ಭದಲ್ಲಿ ಕೆಇಬಿ ಷಣ್ಮುಖಪ್ಪ, ಮುರುಗೇಸ್ ಮಂಜುನಾಥ್ ರವರ ಬಗ್ಗೆ ಮಾತನಾಡಿದರು. ಕಾರ್ಯಕ್ರಮದಲ್ಲಿ ವೀರಶೈವ ಸಮಾಜದ ಅಧ್ಯಕ್ಷರಾದ ಎಸ್.ಎಣ್,ತಿಪ್ಪೇಸ್ವಾಮಿ, ಪತ್ರಕರ್ತರಾದ ಉಜ್ಜನಪ್ಪ, ಬಸವರಾಜು, ಪ್ರಕಾಶ್ ಗುತ್ತಿನಾಡು, ಗ್ರಾಮೀಣ ಬ್ಯಾಂಕ್ ನಿವೃತ್ತ ಅಧಿಕಾರಿ ಕಿರಣ್ ಶಂಕರ್, ವೈಜ್ಞಾನಿಕ ಪರಿಷತ್ ಅಧ್ಯಕ್ಷರಾದ ನಾಗರಾಜ್ ಸಂಗಂ, ಸೇರಿದಂತೆ ಇತರರು ಭಾಗವಹಿಸಿದ್ದರು.

# ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ 5 ದಿನಗಳಿಂದ ನಡೆಸುತ್ತಿದ್ದ ಸತ್ಯಾಗ್ರಹ ಅಂತ್ಯ

ಚಿತ್ರದುರ್ಗ: ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗದ ವರದಿ ಹಾಗೂ ಕಾಂತರಾಜ್ ವರದಿಯನ್ನು ಶೀಘ್ರವೇ ಜಾರಿಗೆ ತರುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕಳೆದ ಐದು ದಿನಗಳಿಂದಲೂ ಒನಕೆ ಓಬವ್ವ ವೃತ್ತದ ಸಮೀಪ ಕರ್ನಾಟಕ ದಲಿತ ಸಂಘರ್ಷ ಸಮಿತಿ(ಶೋಷಿತರ ವಾದ)ಯಿಂದ ನಡೆಯುತ್ತಿದ್ದ ಸತ್ಯಾಗ್ರಹ ಮಂಗಳವಾರ ಅಂತ್ಯಗೊಂಡಿತು.ನಗರದಲ್ಲಿನ ಮುಖ್ಯ ರಸ್ತೆಗಳ ಅಗಲೀಕರಣ, ವಸತಿ ರಹಿತರಿಗೆ ನಿವೇಶನ, ಮನೆಗಳ ನಿರ್ಮಾಣ, ಸರ್ಕಾರದ ಭೂಮಿಯನ್ನು ಅಕ್ರಮವಾಗಿ ಸಾಗುವಳಿ ಮಾಡುತ್ತಿರುವುದನ್ನು ಸಕ್ರಮಗೊಳಿಸಿ ಸಾಗುವಳಿದಾರರಿಗೆ ಹಕ್ಕುಪತ್ರಗಳನ್ನು ನೀಡುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿಗೆ ಮನವಿ ಪತ್ರ ಸಲ್ಲಿಸಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಸಿ.ಹೆಚ್.ಮಂಜುನಾಥ್ ಸತ್ಯಾಗ್ರಹವನ್ನು ಹಿಂದಕ್ಕೆ ಪಡೆದರು.



## ಪ್ರಮುಖ ಸುದ್ದಿ

### ಜಿಲ್ಲಾ ಎಸ್‌ಸಿಡಿ ಕನ್ಸ್‌ಲ್ಟೆಂಟ್ ಡಾ.ಶ್ವೇತಾ ಹೇಳಿಕೆ

# ಹಿಂಜರಿಕೆ ಬಿಡಿ ಕ್ಯಾನ್ಸರ್ ರೋಗ ತಪಾಸಣೆ ಮಾಡಿಕೊಳ್ಳಿ

» ಚಿತ್ರದುರ್ಗ

ಹಿಂಜರಿಕೆ, ಕೀಳರಿಮೆ, ಸಂಕೋಚ ಬಿಟ್ಟು ಕ್ಯಾನ್ಸರ್ ರೋಗದ ತಪಾಸಣೆ ಮಾಡಿಸಿಕೊಳ್ಳಿ ಎಂದು ಜಿಲ್ಲಾ ಎನ್‌ಸಿಡಿ ಕನ್ಸ್‌ಲ್ಟೆಂಟ್ ಡಾ.ಶ್ವೇತಾ ಹೇಳಿದರು.

ನಗರದ ಬಿಸಿಎಂ ಹಾಸ್ಟೆಲ್ ಆವರಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಇವರ ಸಹಯೋಗದೊಂದಿಗೆ ವಿಶ್ವ ಕ್ಯಾನ್ಸರ್ ದಿನದ ಅಂಗವಾಗಿ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜನರಲ್ಲಿ ಇಂದಿಗೂ ಸಹ ಆತಂಕ ಮತ್ತು ಭಯಕ್ಕೆ ಕಾರಣವಾಗುವ ಅತಿ ದೊಡ್ಡ ಮತ್ತು ಹೆಚ್ಚುತ್ತಿರುವ ರೋಗಗಳಲ್ಲಿ ಕ್ಯಾನ್ಸರ್ ಕೂಡ ಒಂದು. ಸಾಮಾನ್ಯವಾಗಿ ಸ್ತನದ ಕ್ಯಾನ್ಸರ್ ಗರ್ಭಕಂಠ ಕ್ಯಾನ್ಸರ್, ಬಾಯಿ ಕ್ಯಾನ್ಸರ್ ಪ್ರಮುಖವಾಗಿ ಭಾರತದಲ್ಲಿ ಆರೋಗ್ಯ ಸಮಸ್ಯೆಗಳಾಗಿವೆ. ಕಾಲ ಕಾಲಕ್ಕೆ ತಪಾಸಣೆ ಸ್ವಯಂ ಪರೀಕ್ಷೆ ಮಾಡಿಕೊಳ್ಳುವುದು. ಪೌಷ್ಟಿಕ ಆಹಾರ ಸೇವನೆ ಜೀವನಶೈಲಿ ಬದಲಾವಣೆ ಮಾಡಿಕೊಳ್ಳುವುದರಿಂದ ನಾವು ಕ್ಯಾನ್ಸರ್ ವಿರುದ್ಧ ಹೋರಾಟ ಮಾಡಬಹುದು ಎಂದರು.



ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ. ಚಂದ್ರಶೇಖರ್ ಕಂಬಾಳಿ ಮಠ ಮಾತನಾಡಿ, ಮಾರ್ಚ್ 1ರಿಂದ ಗೃಹ ಆರೋಗ್ಯ ಯೋಜನೆ ನಿಮ್ಮ ಮನೆ ಮನೆಗೆ ಆರೋಗ್ಯ ಸೇವೆ ಒದಗಿಸುವ ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ಆಶಾ ಕಾರ್ಯಕರ್ತೆಯರು ಭೇಟಿ ನೀಡಿ ಪ್ರತಿ ದಿನ 30 ಮನೆಗಳನ್ನ ನಿಗದಿಗೊಳಿಸಿಕೊಂಡು 30 ವರ್ಷ ಮೇಲ್ಪಟ್ಟ ಕುಟುಂಬದ ಎಲ್ಲಾ ಸದಸ್ಯರಿಗೂ ಸಾಂಕ್ರಾಮಿಕವಲ್ಲದ ರೋಗಗಳ ಬಗ್ಗೆ ಪರೀಕ್ಷೆಗಳು ತಪಾಸಣೆ ಚಿಕಿತ್ಸೆಯನ್ನು ಉಚಿತವಾಗಿ ನೀಡುತ್ತಾರೆ. ಅದರೊಂದಿಗೆ ಕ್ಯಾನ್ಸರ್ ರೋಗದ ಬಗ್ಗೆ ಲಕ್ಷಣಗಳನ್ನು ತಿಳಿಸುತ್ತಾ ಉನ್ನತ ಮಟ್ಟದ ಚಿಕಿತ್ಸೆಗೆ ನಿರ್ದೇಶನ ಮಾಡಲು ನೆರವಾಗುತ್ತಾರೆ. ಎಲ್ಲಾ ಕುಟುಂಬಗಳು ಇವರೊಂದಿಗೆ ಸಹಕರಿಸಿ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಆಹಾರ ಶೈಲಿಯಲ್ಲಿ ಬದಲಾವಣೆ ಮಾಡಿಕೊಳ್ಳಲೇಬೇಕು. ಸುಟ್ಟ, ಹುರಿದ ಬಣ್ಣ ಬಣ್ಣದ ಆಹಾರಗಳನ್ನು ಸೇವನೆ ಮಾಡುವುದರಿಂದ ಕ್ಯಾನ್ಸರ್ ಬರಬಹುದು. ಅಲ್ಲದೆ ಯುವಕರು ಗುಟ್ಕಾ ತಂಬಾಕು ಜಗಿಯುವುದು, ಮದ್ಯಪಾನ, ಧೂಮಪಾನ ಮಾಡುವುದು ಇಂತಹ ಜೀವನ ಶೈಲಿ ಬದಲಾವಣೆ ಮಾಡಿಕೊಳ್ಳಿ. ಆದಷ್ಟು ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಿ ಕ್ಯಾನ್ಸರ್ ಚಿಕಿತ್ಸೆ ತುಂಬಾ ದುಬಾರಿ ಚಿಕಿತ್ಸೆ ಆಗಿರುತ್ತದೆ. ಕುಟುಂಬದ ಮೇಲೆ ಆರ್ಥಿಕ ಹೊರೆ ಬೀಳುತ್ತದೆ. ದುಶ್ಚಟಗಳ ವ್ಯಸನಿಗಳಾಗದೆ ಕ್ಯಾನ್ಸರ್ ಬರದಂತೆ ಜಾಗೃತೆ ವಹಿಸಿ ಎಂದರು.ಬಿಸಿಎಂ ವಸತಿ ನಿಲಯ ನಿಲಯ ಪಾಲಕ ಆನಂದ್ ರಾಜ್, ಸಮುದಾಯ ಆರೋಗ್ಯ ಅಧಿಕಾರಿ ಜಯಲತಾ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಶಿಲ್ಪ, ಆರೋಗ್ಯ ನಿರೀಕ್ಷಣಾಧಿಕಾರಿ ಪ್ರಶಾಂತ್, ರಾಷ್ಟ್ರೀಯ ಬಾಲ್ಯಸ್ವಾಸ್ಥ್ಯ ಕಾರ್ಯಕ್ರಮದ ವೈದ್ಯಾಧಿಕಾರಿ ಡಾ.ಮಹೇಂದ್ರ ಇದ್ದರು.








ಧರ್ಮಸ್ಥಳಕ್ಕೆ ಹೋಗಿ ಬಂದರೆ ವಯಸ್ಸಾಗುತ್ತಿರುವ ಮಗಳಿಗೆ ಮದುವೆಯಾಗುತ್ತದೆ,....

ತಿರುಪತಿಗೆ ಹೋಗಿ ಬಂದರೆ ನಿರುದ್ಯೋಗಿ ಮಗನಿಗೆ ಕೆಲಸ ಸಿಗುತ್ತದೆ,.......ಶಬರಿಮಲೆಗೆ ಹೋಗಿ ಬಂದರೆ ಅಪ್ಪ ಅಮ್ಮನ ಆರೋಗ್ಯ ಸುಧಾರಿಸುತ್ತದೆ,.. ...ಸುಬ್ರಮಣ್ಯಕ್ಕೆ ಹೋಗಿ ಬಂದರೆ ನಷ್ಟದ ವ್ಯವಹಾರ ಲಾಭಗಳಿಸುತ್ತದೆ,.....ಶಿರಡಿಗೆ ಹೋಗಿ ಬಂದರೆ ಮಗಳು ಫಸ್ಟ್‌ಕ್ಲಾಸ್ ನಲ್ಲಿ ಪಾಸಾಗುತ್ತಾಳೆ,..... ಮಂತ್ರಾಲಯಕ್ಕೆ ಹೋಗಿ ಬಂದರೆ ವೃತ್ತಿಯಲ್ಲಿ ಬಡ್ತಿ ಸಿಗುವುದು ಖಚಿತ........

ತಿರುನಲ್ಲಾರ್ ಶನಿದೇವರ ದರ್ಶನ ಮಾಡಿದರೆ ಓಡಿ ಹೋಗಿರುವ ಗಂಡ ಮರಳಿ ಮನೆಗೆ ಬರುತ್ತಾನೆ,....

ವೈಷ್ಣವೋ ದೇವಿಯ ದರ್ಶನ ಮಾಡಿದರೆ ಎಲ್ಲಾ ಕಷ್ಟಗಳು ಪರಿಹಾರವಾಗುತ್ತವೆ,.....

ಕಾಶಿಗೆ ಹೋಗಿ ಬಂದರೆ ಎಲ್ಲಾ ಪುಣ್ಯ ಫಲಗಳೂ ಸಿಗುತ್ತವೆ,.... ಸೋಮವಾರ ಉಪವಾಸ ಮಾಡಿ ಅರಳಿಮರ ಸುತ್ತಿದರೆ ಹಣಕಾಸಿನ ಸಮಸ್ಯೆ ಪರಿಹಾರವಾಗುತ್ತದೆ,..... ಮೆಕ್ಕಾ ಯಾತ್ರೆ ಮಾಡಿದರೆ ಸ್ವರ್ಗ ಪ್ರಾಪ್ತಿಯಾಗುತ್ತದೆ,.....

ವ್ಯಾಟಿಕನ್ ಸಿಟಿ ನೋಡಿ ಬಂದರೆ ಜೀವನ ಪಾವನವಾಗುತ್ತದೆ,........

ಅಮೃತಸರದ ಸ್ವರ್ಣ ದೇಗುಲಕ್ಕೆ ಭೇಟಿ ನೀಡಿದರೆ ಮಾಡಿದ ಪಾಪಗಳಿಗೆ ಪ್ರಾಯಶ್ಚಿತ್ತ ಸಿಗುತ್ತದೆ.....

ಹೌದೇ, ಇದು ನಿಜವೇ ?....

ಹಾಗೇನಾದರೂ ಆಗುವುದಾದರೆ ನಮಗೂ ಸಂತೋಷವೇ, ವಿಧಾನಸೌಧವನ್ನು, ಸಂಸತ್ತನ್ನು ಕಿತ್ತೊಗೆದು ಮೇಲಿನ ಸ್ಥಳಗಳನ್ನೇ ಆಡಳಿತ ಕೇಂದ್ರಗಳಾಗಿ ಘೋಷಿಸಬಹುದಿತ್ತು,.....

ಈ ಮಂತ್ರಿಮಂಡಲವನ್ನು ವಿಸರ್ಜಿಸಿ ಆ ದೇವರುಗಳನ್ನೇ ಆಡಳಿತ ನಡೆಸಲು ನೇಮಿಸಬಹುದಿತ್ತು,.....ಆಸ್ಪತ್ರೆಗಳನ್ನು ಹೊಡೆದುಹಾಕಿ ದೇವಮಂದಿರಗಳನ್ನೇ ಕಟ್ಟಬಹುದಿತ್ತು........

ಆದರೆ ವಾಸ್ತವ.....

ದೇವರನ್ನು ಕಾಣುವ ಪ್ರಯತ್ನ......

ನಮ್ಮ ನಂಬಿಕೆ ಭಾವನೆಗಳು ಎಷ್ಟು ಸತ್ಯ – ಎಷ್ಟು ಮಿಥ್ಯ........ಸಾಮಾನ್ಯ ಜನರ ಸಾಮಾನ್ಯ ಅಭಿಪ್ರಾಯದ ದೇವರು ಇರುವುದು ಎಲ್ಲಿ.......

ವೆಂಕಟೇಶ್ವರನನ್ನು ಕಾಣಲು ಕಾಲ್ನಡಿಗೆಯಲ್ಲಿ ತಿರುಮಲಕ್ಕೆ ಹೋಗಿದ್ದೆ. ಆ ಜನರಾಶಿಯಲ್ಲಿ ವಿಗ್ರಹಕ್ಕೆ ಕೈಮುಗಿದು ವಾಪಸ್ಸು ಬಂದೆ. ದೇವರು ಕಾಣಲಿಲ್ಲ.....

ಅಯ್ಯಪ್ಪನನ್ನು ನೋಡಲು ಕಪ್ಪುಬಟ್ಟೆ ತೊಟ್ಟು ನೀತಿ ನಿಯಮದಂತೆ ಶಬರಿಮಲೆಗೆ ಹೋಗಿದ್ದೆ. ಅಲ್ಲಿಯೂ ದೇವರು ಸಿಗಲಿಲ್ಲ.......

ಮಂಜುನಾಥನನ್ನು ಮಾತನಾಡಿಸಲು ಧರ್ಮಸ್ಥಳಕ್ಕೆ ಹೋಗಿದ್ದೆ. ಅಲ್ಲಿಯೂ ಆತನ ಮೂರ್ತಿಗೆ ಕೈಮುಗಿದೆ. ಅಲ್ಲಿ ಆತನೂ ಗೋಚರಿಸಲಿಲ್ಲ.....

ಅನಂತ ಪದ್ಮನಾಭನನ್ನು ಭೇಟಿಯಾಗಲು ತಿರುವನಂತಪುರಕ್ಕೆ ಹೋಗಿದ್ದೆ. ಬಿಳಿಬಟ್ಟೆ ತೊಟ್ಟು ಸಂದರ್ಶಿಸಿದೆ. ವಿಗ್ರಹ ಬಿಟ್ಟರೆ ಮತ್ತ್ಯಾರು ಪ್ರತ್ಯಕ್ಷವಾಗಲಿಲ್ಲ.....

ವೈಷ್ಣವೋದೇವಿಯನ್ನು ನೋಡಲು ಜಮ್ಮುವಿಗೂ ಹೋಗಿದ್ದೆ. ಅಲ್ಲಿಯೂ ಶಿಲೆ ಬಿಟ್ಟರೆ ಬೇರೇನೂ ಇರಲಿಲ್ಲ.....

ಕಾಶಿ ವಿಶ್ವನಾಥನನ್ನು ಮಾತನಾಡಿಸಲು ವಾರಣಾಸಿಗೂ ಭೇಟಿಕೊಟ್ಟೆ. ಅಲ್ಲಿಯೂ ನಿರಾಸೆಯೇ ಆಯಿತು......

ಮಧುರೆ ಮೀನಾಕ್ಷಿ – ಕಂಚಿ ಕಾಮಾಕ್ಷಿ – ಕಟೀಲು ದುರ್ಗಾಪರಮೇಶ್ವರಿ – ಕುಕ್ಕೆ ಸುಬ್ರಹ್ಮಣ್ಯ – ಮೈಸೂರು ಚಾಮುಂಡೇಶ್ವರಿ – ಎಲ್ಲಾ ಕಡೆ ಇರುವ ಜ್ಯೋತಿರ್ಲಿಂಗಗಳು – ಕೈಲಾಸ ಪರ್ವತ – ಮಾನಸ ಸರೋವರ – ಶಿರಡಿ ಸಾಯಿಬಾಬ – ಮಂತ್ರಾಲಯ ರಾಘವೇಂದ್ರ ಸೇರಿ ಅಸಂಖ್ಯಾತ ಪ್ರಸಿದ್ಧ ದೇವರು ದೇವಸ್ಥಾನಗಳಲ್ಲಿಯೂ ಹುಡುಕಾಡಿದೆ. ಎಲ್ಲಿಯೂ ಕಾಣಲಿಲ್ಲ......

ಮೆಕ್ಕಾ – ವ್ಯಾಟಿಕನ್ ಮುಂತಾದ ಸ್ಥಳಗಳ ಪರಿಸ್ಥಿತಿ ಇದಕ್ಕಿಂತ ಭಿನ್ನವಾಗಿಲ್ಲ,......

ಗೌತಮ ಬುದ್ಧ, ಮಹಾವೀರ, ಗುರುನಾನಕ್, ಸ್ವಾಮಿ ವಿವೇಕಾನಂದ, ರಾಮಕೃಷ್ಣ ಪರಮಹಂಸ, ಚೈತನ್ಯ, ರಾಮದಾಸ, ಕಬೀರ, ಮೀರಾಬಾಯಿ, ಶಂಕರಾಚಾರ್ಯ, ರಾಮಾನುಜಾಚಾರ್ಯ, ಮಧ್ವಾಚಾರ್ಯ, ಕನಕ, ಪುರಂದರ, ರಮಣ, ನಾರಾಯಣಗುರು, ಜೊತೆಗೆ ವೇದ, ಉಪನಿಷತ್, ಭಗವದ್ಗೀತೆ, ಖುರಾನ್, ಬೈಬಲ್, ಗ್ರಂಥಾಸಾಹೇಬ್ ಮುಂತಾದ ಎಲ್ಲರನ್ನೂ, ಎಲ್ಲಾ ಪವಿತ್ರ ಗ್ರಂಥಗಳನ್ನು ಓದಿ, ಕೇಳಿ, ತಿಳಿದು ಅರಿಯಲು ಪ್ರಯತ್ನಿಸಿದೆ. ಹೂ ಹೂಂ, ಅವರೆಲ್ಲಾ ಸಿಕ್ಕರು ಆದರೆ ದೇವರು ಸಿಗಲೇ ಇಲ್ಲ.....

ಬಸವ – ಗಾಂಧಿ – ಅಂಬೇಡ್ಕರ್ ಪೆರಿಯಾರ್, ಲೋಹಿಯಾ ಎಲ್ಲರನ್ನೂ ಓದಿ ಅರಿಯಲು ಪ್ರಯತ್ನಿಸಿದೆ. ಅವರು ಅರ್ಥವಾದರು. ದೇವರು ಮಾತ್ರ ಕಾಣಲೇ ಇಲ್ಲ.....

ಪ್ರಖಾಂಡ ಪಂಡಿತರು, ತತ್ವಜ್ಞಾನಿಗಳು, ಮಹರ್ಷಿಗಳು, ವಿಚಾರವಾದಿಗಳು, ವಿಜ್ಞಾನಿಗಳು, ಡಾಕ್ಟರುಗಳು ಎಲ್ಲರ ಬಳಿಯೂ ಕೇಳಿದೆ. ಅವರು ತುಂಬಾ ಒಳ್ಳೆಯ ಉತ್ತರ ಕೊಟ್ಟು ಅರ್ಥ ಮಾಡಿಸಿದರು. ಆದರೆ ದೇವರನ್ನು ಮಾತ್ರ ಭೇಟಿ ಮಾಡಿಸಲಿಲ್ಲ......

ಕೊನೆಗೊಬ್ಬ ಹೇಳಿದ " ಅಯ್ಯಾ ಹುಚ್ಚ. ದೇವರು ಎಲ್ಲೆಲ್ಲಿಯೋ ಇಲ್ಲ. ಆತ ನಿನ್ನೊಳಗೇ ಅಡಗಿದ್ದಾನೆ. " ನಾನು ನನ್ನೊಳಗೂ ಹುಡುಕಿದೆ. ಅಲ್ಲಿಯೂ ಸಿಗಲೇ ಇಲ್ಲ......

ನೋಡಲು ಹೇಗಿದ್ದಾನೋ ಎಂಬ ಕುತೂಹಲ ನನಗೆ,.....ನಮ್ಮಲ್ಲಿ ಅನೇಕ ದೇವಸ್ಥಾನಗಳಿವೆ, ಆತ ಎಲ್ಲಿಗೆ ಬರುತ್ತಾನೆ,

ಯಾವ ದೇವಸ್ಥಾನಕ್ಕೆ ಹೋಗಲಿ, ಅಥವಾ

ನಮ್ಮ ಮನೆಗೇ ಬರುತ್ತಾನೆಯೇ, ಸ್ವಲ್ಪ ಗೊಂದಲವಿದೆ,.....

ಒಂದು ವೇಳೆ ಆತ ಕಾಣಲು ಸಿಕ್ಕರೆ....

ಅವನನ್ನು ಮೊದಲು ಕಣ್ತುಂಬ ನೋಡುತ್ತೇನೆ,

ಆಮೇಲೆ ಕೇಳುತ್ತೇನೆ,...

ಇಷ್ಟುದಿನ ಎಲ್ಲಿದ್ದೆ ?

ಏನು ಮಾಡುತ್ತಿದ್ದೆ ?

ನೀನು ಯಾರು ?

ನಿನ್ನ ಶಕ್ತಿ ಏನು ?

ನಿನ್ನ ವ್ಯಾಪ್ತಿ ಏನು ?

ನನ್ನ ಮೇಲೆ ನಿನ್ನ ನಿಯಂತ್ರಣವೇನು ?

ಜೀವ – ಪ್ರಾಣ – ಆತ್ಮ ಎಂದರೇನು ?

ಬದುಕು ಎಂದರೇನು ?

ಒಳ್ಳೆಯದು ಯಾವುದು? ಕೆಟ್ಟದು ಯಾವುದು ?

ನಾನು ಯಾರು ?

ನಾನೇಕೆ ಇಲ್ಲಿದ್ದೇನೆ ?

ನಾನೇನು ಮಾಡಬೇಕು ?

ನಾನು ಸ್ವತಂತ್ರನೇ ?

ಅಥವಾ

ನಾನು ನಿನ್ನ ಆಜ್ಞಾಪಾಲಕನೇ ?

ನನ್ನ ಪಾಡಿಗೆ ನಾನಿರಬೇಕೇ ? ಅಥವಾ

ನೀನು ಹೇಳಿದಂತೆ ಕೇಳಬೇಕೆ ?...

ನಿನ್ನ ಪ್ರತಿನಿಧಿಗಳೇನಾದರೂ ಇದ್ದಾರೆಯೇ ?

ಅಥವಾ

ಯಾವುದಾದರೂ ಗ್ರಂಥಗಳನ್ನೇನಾದರೂ ಬರೆದಿರುವೆಯಾ ?ಅಥವಾ

ಅವರ್ಯಾರು ಮತ್ತು ಅದು ಯಾವುದು ?

ಅವರನ್ನು ಹೇಗೆ ಗುರುತಿಸುವುದು ?....

ಈ ಕಾನೂನು ಯಾವುದು ?

ಈ ಪೋಲೀಸರು ಯಾರು ?

ಈ ಡಾಕ್ಟರುಗಳು ಯಾರು ?

ಈ ನ್ಯಾಯಾಧೀಶರು ಯಾರು ?

ಈ ಅತ್ಯಾಚಾರಿಗಳು ಯಾರು ?

ಈ ಮಂತ್ರಿಗಳು ಯಾರು ?

ಈ ಕಳ್ಳರು ಯಾರು ?

ಈ ಜ್ಯೋತಿಷಿ– ಮಹರ್ಷಿಗಳು ಯಾರು ?.....

ನಿನ್ನ ಧರ್ಮ ಯಾವುದು ? ನಿನ್ನ ಜಾತಿ ಯಾವುದು ? ನಿನ್ನ ಭಾಷೆ ಯಾವುದು ? ನೀನಿರುವ ಸ್ಥಳ ಯಾವುದು ? ನೀನು ಒಬ್ಬನೇ ? ಅಥವಾ ನಿನ್ನಂತೆ ಹಲವರಿದ್ದಾರೆಯೇ ?.....

ನೀನು ನಮ್ಮ ದೇಶಕ್ಕೆ ಮಾತ್ರ ಸೀಮಿತವೇ ?

ಅಮೆರಿಕಾ ನಿನ್ನದೇ ?

ಆಫ್ರಿಕಾ ನಿನ್ನದೇ ?

ಆಸ್ಟ್ರೇಲಿಯಾ ನಿನ್ನದೇ ?

ಯೂರೋಪ್ ನಿನ್ನದೇ ?

ಪಾಕಿಸ್ತಾನ ನಿನ್ನದೇ ?

ಜಪಾನ್ ನಿನ್ನದೇ ?

ಏಷ್ಯಾ ನಿನ್ನದೇ ?

ಈ ಭೂಮಿ ನಿನ್ನದೇ ?

ಸೂರ್ಯ ಚಂದ್ರ ನಕ್ಷತ್ರಗಳು ನಿನ್ನದೇ ?......

ಯಾವ ವೇದ ಮಂತ್ರ ತಂತ್ರ ತರ್ಕಗಳು ಬೇಡ, ನೇರವಾಗಿ ನೀನೇ ಉತ್ತರಿಸು .........

ಏಕೆಂದರೆ ಎಲ್ಲರೂ ಹೇಳುತ್ತಾರೆ, ನಿನ್ನನ್ನು ನೋಡಲು ಮಹಾ ಜ್ಞಾನ ಬೇಕಂತೆ,

ಆದರೆ ನಾನೊಬ್ಬ ಅಜ್ಞಾನಿ ,

ನಿನ್ನ ಅವಶ್ಯಕತೆ ಇರುವುದು ನಮ್ಮಂಥವರಿಗೆ,.....

ಆದ್ದರಿಂದ ಆತ ಬಂದು ಕಾಣಿಸಿ ನನ್ನ ಪ್ರಶ್ನೆಗಳಿಗೆ ಉತ್ತರ ಕೊಡುವವರೆಗೂ,

ಈಗ ಒಂದು ತೀರ್ಮಾನಕ್ಕೆ ಬಂದಿದ್ದೇನೆ.......

ದೇವರೆಂಬ ವ್ಯಕ್ತಿಯೂ ಇಲ್ಲ. ಶಕ್ತಿಯೂ ಇಲ್ಲ. ಅತಿಮಾನುಷ ಕ್ರಿಯೆಯೂ ಇಲ್ಲ.

ಅದೊಂದು ಕಲ್ಪನೆ – ಭಾವನೆ – ಗ್ರಹಿಕೆ......

ನಿಸ್ಸಹಾಯಕರಿಗೆ ಆಶಾಕಿರಣ, ದುರ್ಬಲರಿಗೆ ಆತ್ಮವಿಶ್ವಾಸ, ಕುತಂತ್ರಿಗಳಿಗೆ ಶೋಷಣೆಯ ಅಸ್ತ್ರ,

ಕಿಲಾಡಿಗಳಿಗೆ ಹೊಟ್ಟೆಪಾಡು, ಸಮಾಜಕ್ಕೆ ಭಯ ಭಕ್ತಿಯ ಭ್ರಮೆ,

ಬಹುತೇಕರಿಗೆ ನಂಬಿಕೆ ಇತ್ಯಾದಿ ಇತ್ಯಾದಿ........

ಅವರವರ ಭಾವಕ್ಕೆ ತಕ್ಕಂತೆ ಅರ್ಥೈಸುವ ಒಂದು ಅಮೂರ್ತ ಸ್ವರೂಪ,

ಅದಕ್ಕೆ ಮೂರ್ತರೂಪ ಕೊಟ್ಟು ತನಗೆ ಬೇಕಾದಂತೆ ಬಳಸುವ ಸಾಧನ, ಇದೇ ಸದ್ಯದ ಸತ್ಯ ಮತ್ತು ವಾಸ್ತವ ಮತ್ತು ಎಂದೆಂದೂ ಮುಗಿಯದ

ಕಾಲದ ಆಟ...........

ನಿಮ್ಮ ನಿಮ್ಮ ಅರಿವಿನಲ್ಲಿ, ನಿಮ್ಮ ನಿಮ್ಮ ಅನುಭವದಲ್ಲಿ,ಧೈರ್ಯವಾಗಿ, ಆತ್ಮಸಾಕ್ಷಿಗೆ ಅನುಗುಣವಾಗಿ ಯೋಚಿಸಿ,

ಇದು ಸಾಧ್ಯವೆ ?.....

ಕೆಲವರು ಹೇಳುತ್ತಾರೆ,

ಇದು ನಮ್ಮ ನಂಬಿಕೆ, ಆ ಸ್ಥಳಗಳಿಗೆ ಹೋದಾಗ

ನಮಗೆ ಮಾನಸಿಕ ನೆಮ್ಮದಿ ದೊರೆಯುತ್ತದೆ.

ಇದು ಸ್ವಲ್ಪಮಟ್ಟಿಗೆ ನಿಜವಿರಬಹುದು,.....

ನನಗೆ ಗೊತ್ತು, ಈ ಕಾರಣಕ್ಕಾಗಿ ನೀವು ನನ್ನನ್ನು ದ್ವೇಷಿಸಬಹುದು, ಮೂರ್ಖನೆನ್ನಬಹುದು,

ಆದರೂ ನನ್ನ ಅನಿಸಿಕೆ ವ್ಯಕ್ತಪಡಿಸುತ್ತೇನೆ,.....

ಮೌಢ್ಯದಿಂದ ಬರುವ/ಸಿಗುವ ಮಾನಸಿಕ ನೆಮ್ಮದಿ,ನಂಬಿಕೆ ಎನ್ನುವ ಭ್ರಮೆ ತಾತ್ಕಾಲಿಕ ಮತ್ತು ವಿನಾಶಕಾರಿ,ಅದೇ ನಿಮ್ಮ ಜ್ಞಾನದಿಂದ, ಧ್ಯಾನದಿಂದ, ಯೋಗದಿಂದ ಸಿಗುವ, ನೆಮ್ಮದಿ ಶಾಶ್ವತ, ಸ್ವಾಭಾವಿಕ ಮತ್ತು ನೈಜವಾದದ್ದು.......

ಈ ವಿಷಯದಲ್ಲಿ ಇತರರ ಪ್ರವಚನಗಳಿಗೆ, ಹೇಳಿಕೆಗಳಿಗೆ ಕಿವಿಗೊಡದೆ ನಿಮ್ಮ ಅರಿವಿನಲ್ಲೇ ನಿರ್ಧಾರ ತೆಗೆದುಕೊಳ್ಳಿ.....

ಹೇಗಿದ್ದರೂ ಆ ಸ್ವಾತಂತ್ರ್ಯ ನಿಮಗಿದ್ದೇ ಇದೆ.

ಜ್ಞಾನ ಯಾರ ಆಸ್ತಿಯೂ ಅಲ್ಲ ಅದು ನಿಮ್ಮದೇ ಸಂಪತ್ತು.....ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ, ಮನೆಗಳಲ್ಲಿ ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

---

ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಗಿಣ್ಣಪ್ಪನಹಟ್ಟಿ ಗ್ರಾಮದ ಪಾನಿಪೂರಿ ವ್ಯಾಪಾರಿ ಭೂತೇಶ, ಭಾಗ್ಯ ದಂಪತಿಯ ಪುತ್ರಿ ಪ್ರಿಯಾ ಅವರ ಶಿಕ್ಷಣಕ್ಕೆ ಭೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ 1,10,000 ರೂ. ಆರ್ಥಿಕ ನೆರವು ನೀಡಿದರು.



## ಇಂದು ರಥಸಪ್ತಮಿ; 108 ಸೂರ್ಯ ನಮಸ್ಕಾರ

**ಚಿತ್ರದುರ್ಗ:** ಬರುವ ಇದೆ ಐದರಂದು ಜಿಲ್ಲಾ ಯೋಗ ಸಂಸ್ಥೆ ,ಚಿತ್ರದುರ್ಗ, ಚಿತ್ರದುರ್ಗ ರೋಟರಿ ಕ್ಲಬ್ ಫೋರ್ಟ್ ,ಇನ್ನರ್ವಿಲ್ ಕ್ಲಬ್ ಚಿತ್ರದುರ್ಗ ಫೋರ್ಟ್ ಹಾಗೂ ಚಿತ್ರದುರ್ಗ ಜಿಲ್ಲಾ ವೀರಶೈವ ಸಮಾಜ ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ನೀಲಕಂಠೇಶ್ವರ ಸ್ವಾಮಿ ಸಮುದಾಯವನಲ್ಲಿ ಬೆಳಗ್ಗೆ 5–30ರಿಂದ ರಥಸಪ್ತಮಿ ಪ್ರಯುಕ್ತ 108 ಸೂರ್ಯ ನಮಸ್ಕಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ.

**ರಥಸಪ್ತಮಿಯ ಮಹತ್ವ:** ರಥಸಪ್ತಮಿಯನ್ನು ಅಚಲ ಸಪ್ತಮಿ, ಮಾಘಸಪ್ತಮಿ ಅಥವಾ ಸೂರ್ಯ ಸಪ್ತಮಿ ಎಂದು ಕರೆಯುವರು.ರಥಸಪ್ತಮಿಯನ್ನು ಬಹು ಹಿಂದಿನಿಂದಲೂ ಆಚರಿಸಿಕೊಂಡು ಬಂದಿರುವುದು ಒಂದು ವಿಶೇಷ. ಹಾಗೇ ಇದು ವಿಶಿಷ್ಟ ಹಬ್ಬವಾಗಿದೆ. ರಥಸಪ್ತಮಿಯು ಮಾಘ ಮಾಸದ ಶುಕ್ಲ ಪಕ್ಷದ 7ನೇ ತಿಥಿ ಅಂದರೆ ಸಪ್ತಮಿಯ ದಿವಸದಂದು ಆಚರಿಸಲ್ಪಡುವ ಪದ್ಧತಿಯಾಗಿದೆ. ಸೂರ್ಯನ ಜನ್ಮದಿನವೆಂತಲೂ ಭಾವಿಸಲಾಗಿದೆ. ನಮ್ಮ ರಾಷ್ಟ್ರದಲ್ಲಿ ಅಲ್ಲದೆ ಜಗತ್ತಿನ ಅನೇಕ ಭಾಗಗಳಲ್ಲಿಯೂ ರಥಸಪ್ತಮಿಯನ್ನು ಆಚರಿಸುವರು.ಯೋಗ ಸಾಧಕರು ಸೇರಿದಂತೆ ಇತರೆ ಆಸಕ್ತಿಯುಳ್ಳವರು ಬನ್ನಿ,.. ನಾವೆಲ್ಲರೂ ಒಂದಾಗಿ ಸೇರಿ ಸಾಮೂಹಿಕ ಸೂರ್ಯ ನಮಸ್ಕಾರ ಮಾಡುವ. ಹೆಚ್ಚಿನ ಮಾಹಿತಿಗಾಗಿ,:99862 95285;:94481 44871;; 9620653375.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T